ಸಂಪುಟ : 10 ಸಂಚಿಕೆ 17 ಪುಟ : 4+2 ಬೆಲೆ: 3.00 ಗುರುವಾರ ಫೆಬ್ರವರಿ 13 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 17 Pages : 4+2 Price : 3.00 Thursday February 13 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 13 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 16, 21 – ಕುಂಬೇಶ್ವರ ನಗರ 4 ಭಾಗಗಳು, ಸುಣ್ಣದ ಭಟ್ಟಿ, ಅಂಬೇಡ್ಕರ್ ನಗರ, ಕುಷ್ಠರೋಗ ಕಾಲೋನಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 27, 28 – ಸ್ಟೇಡಿಯಂ, ನಂದೀಶ್ವರ ಮಠ, ಕುಲಕರ್ಣಿಯವರ ಲೈನ್, ಸಂಕಣ್ಣವರ್ ಲೈನ್, ತಂಬ್ರಳ್ಳಿ ಮಠ, ತುಪ್ಪದ ಮಾಸ್ತರ್ ಲೈನ್, ಜಿ ಎಸ್ ಪಾಟೀಲ್ ಲೈನ್, ನಾಗರಕಟ್ಟಿ, ಕುರಡಗಿ ಡಾಕ್ಟರ್ ಲೈನ್, ಮಲ್ಲಾಡದವರ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 4 – ಕಣವಿ ಪ್ಲಾಟ್, ಟರ್ನಲ್ ಪೇಟೆ, ಗೌರಿ ಗುಡಿ, ಬಿ ಎಸ್ ಎನ್ ಎಲ್ ಆಫೀಸ್, ಸುಣ್ಣದ ಭಟ್ಟಿ, ಪಾಂಡ್ರೆಯವರ ಲೈನ್, ಸ್ವಾಗತ ಹೋಟೆಲ್, 275 ಮನೆ , 200 ಮನೆ, ಮಂಜುನಾಥ್ ನಗರ, ಕುಲಮಿ ಲೈನ್, ಹುಯಿಲಗೋಳ ರಸ್ತೆಯ ಬಲಭಾಗದ ಪೂರ್ತಿ ಭಾಗಗಳು.

ವಾರ್ಡ್ ನಂ. 22 – ದೊಡ್ಡ ಮಸೂತಿ, ಅಪಾರ್ಟ್ಮೆಂಟ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 7 – ಪಂಚ ಲಕ್ಷ್ಮೀ ಬಡಾವಣೆ 4 ಭಾಗಗಳು ಉಳಿದ ಕೆಲವು ಭಾಗಗಳು. ವಾರ್ಡ್ ನಂ. 30, 34, 35 – 1, 2, 3ನೇ ಕ್ರಾಸ್ ಗಳು ಉಳಿದ ಕೆಲವು ಭಾಗಗಳು. ವಾರ್ಡ್ ನಂ. 27 – ಲಕ್ಕಣ್ಣವರ್ ಲೈನ್, ಬುರಬುರೆ ದವಾಖಾನೆ, ಮೆಹರವಾಡೆಯವರ ಲೈನ್, ಮುಳಗುಂದರವರ ಲೈನ್, ಹುಬ್ಬಳ್ಳಿಮಠದ ಅವರ ಲೈನ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಮತ್ತು ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ನಿಯ ಕಿರುಕುಳ: ಖ್ಯಾತ ರ್‍ಯಾಪರ್ ಸೂಸೈಡ್!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದ ಕಾಡುಬೀಸನಹಳ್ಳಿಯ ಅಪಾರ್ಟ್ಮೆಂಟ್ ನಲ್ಲಿ ವಿಷ ಸೇವಿಸಿ ಒಡಿಶಾದ ಖ್ಯಾತ ರ್‍ಯಾಪರ್ ಸೂಸೈಡ್ ಮಾಡಿಕೊಂಡಿದ್ದಾರೆ. ಅಭಿನವ್ ಸಿಂಗ್ ಆತ್ಮಹತ್ಯೆ ಮಾಡಿಕೊಂಡ ರ್‍ಯಾಪರ್. ವೃತ್ತಿಯಲ್ಲಿ ಇಂಜಿನಿಯರ್ ಆಗಿದ್ದ ಒಡಿಶಾ ಮೂಲದ ಖ್ಯಾತ ರ್‍ಯಾಪರ್ ಅಭಿನವ್ ಸಿಂಗ್, ಬೆಂಗಳೂರಿನ ಕಾಡುಬೀಸನಹಳ್ಳಿಯ ಅಪಾರ್ಟ್ಮೆಂಟ್ ನಲ್ಲಿ ವಾಸವಾಗಿದ್ದರು. ಆದ್ರೆ, ಏನಾಗಿತ್ತೋ ಏನೋ ಏಕಾಏಕಿ ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾಗಿದ್ದಾರೆ.

ಪತ್ನಿ ಕಿರುಕುಳದಿಂದಲೇ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಮೃತ ಅಭಿನವ್ ಸಿಂಗ್ ಅವರ ಕುಟುಂಬಸ್ಥರು ಆರೋಪಿಸಿದ್ದು, ಈ ಸಂಬಂಧ ಮಾರತ್ ಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ವಿವಿಧ ಆಯಾಮಾಗಳಲ್ಲಿ ತನಿಖೆ ನಡೆಸಿದ್ದಾರೆ.

### ನಿಯಮ ಬಾಹಿರ ಬಡ್ಡಿ ವಸೂಲಿಗಾರರಿಂದ ಬಡಜನರ ರಕ್ಷಣೆಗೆ ಮಹತ್ವದ ಕಾನೂನು: ಎಚ್.ಕೆ. ಪಾಟೀಲ

# ಸುಗ್ರೀವಾಜ್ಞೆ ಅದ್ಯಾದೇಶಕ್ಕೆ ರಾಜ್ಯಪಾಲರ ಅಂಕಿತ

■ ವಿಜಯಸಾಕ್ಷಿ ಸುದ್ದಿ, ಗದಗ

ಮೈಕ್ರೋ ಸಾಲ, ಸಣ್ಣ ಸಾಲಗಳ ಬಲವಂತದ ವಸೂಲಿ ಪ್ರತಿಬಂಧಕ ಅದ್ಯಾದೇಶಕ್ಕೆ ರಾಜ್ಯಪಾಲರಿಂದ ಬುಧವಾರ ಒಪ್ಪಿಗೆ ಸಿಕ್ಕಿದೆ. ಕಾನೂನು ಬಾಹಿರ ಲೇವಾದೇವಿ ವ್ಯವಹಾರ ಮಾಡಿ ಸಾಲ ಪಡೆದವರನ್ನು ಹಿಂಸಿಸುವ, ಒತ್ತೆಯಾಳುಗಳನ್ನಾಗಿ ಮಾಡಿಕೊಳ್ಳುವ, ದೈಹಿಕ ಹಿಂಸೆ ನೀಡುವ ಅಕ್ರಮ ಕೃತ್ಯವನ್ನು ನಿಯಂತ್ರಿಸಲು ಮತ್ತು ಅಕ್ರಮ ಲೇವಾದೇವಿ ವ್ಯವಹಾರ ನಿಯಂತ್ರಿಸಲು ಈ ಸುಗ್ರೀವಾಜ್ಞೆ ಮೂಲಕ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಿದೆ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯಪಾಲರು ಒಪ್ಪಿಗೆ ನೀಡಿದ್ದರಿಂದ ಬಡವರ ರಕ್ಷಣೆಗೆ ಸರ್ಕಾರಕ್ಕೆ ಬಲ ಬಂದಂತಾಗಿದೆ. ಸಾಲಗಾರರಿಂದ ಜನರನ್ನು ರಕ್ಷಿಸಲು ಜನಪರ ಕಾನೂನು ಅವಶ್ಯವಿತ್ತು. ಸಾಲ ವಸೂಲಿ ಹೆಸರಲ್ಲಿ ಕಿರುಕುಳ, ಅಮಾನವೀಯ ಕೃತ್ಯಗಳು, ವಿಪರೀತ ಬಡ್ಡಿ, ಮೀಟರ್ ಬಡ್ಡಿ ದಂಧೆಗಳಿಗೆ ತಡೆ



ನೀಡಬೇಕು ಎಂಬ ನಿಲುವು ಸರ್ಕಾರ ಹೊಂದಿದೆ. ಇದರ ಪರಿಣಾಮವೇ ಸುಗ್ರೀವಾಜ್ಞೆ ಎಂದು ಹೇಳಿದರು.

ಸುಗ್ರೀವಾಜ್ಞೆ ತರುವ ಸಂದರ್ಭದಲ್ಲಿ ರಾಜ್ಯದಲ್ಲಿ ಸಂವಾದ, ವಾದ-ವಿವಾದ, ಆಲೋಚನೆಗಳನ್ನು ಸರಿದೂಗಿಸಿ ಜನಪರ ಸುಗ್ರೀವಾಜ್ಞೆ ತರಲಾಗಿದೆ. ರೈತರು, ಮಹಿಳೆಯರು, ಮಹಿಳಾ ಸ್ವ-ಸಹಾಯ ಗುಂಪು, ಮಹಿಳಾ ರೈತರು, ಫುಟ್‌ಪಾತ್ ಉದ್ದಿಮೆಗಳು, ಅಂಗಂಡಿಗಳಲ್ಲಿ ಕೆಲಸ ಮಾಡುವರು, ಬಡವರು, ಆರ್ಥಿಕವಾಗಿ ಹಿಂದುಳಿದವರ ರಕ್ಷಣೆ ಮಾಡಲು ಈ ಸುಗ್ರೀವಾಜ್ಞೆಯಿಂದ ಅನುಕೂಲ ಆಗಲಿದೆ.

ನೋಂದಾಯಿತವಲ್ಲದ, ಕಾನೂನು ಬಾಹಿರವಾಗಿ ಲೇವಾದೇವಿ ವ್ಯವಹಾರ ಮಾಡುವರ ಮೇಲೆ ಕ್ರಮ ಕೈಗೊಳ್ಳಲಾಗುವುದು. ಸಾಲ ಪಡೆದವರಿಗೆ ಒತ್ತಾಯಪೂರ್ವಕ ಕಿರುಕುಳ, ಅವರನ್ನು ಒತ್ತೆ ಆಳುಗಳಾಗಿ ಮಾಡಿಕೊಳ್ಳುವುದು ಕಾನೂನು ಬಾಹಿರ ಚಟುವಟಿಕೆ ಆಗಿತ್ತು. ಲೇವಾದೇವಿ ವ್ಯವ್ಯಹಾರ ಮಾಡುವವರಿಂದ ಕಿರುಕಳಕ್ಕೆ ಒಳಪ್ಪಟ್ಟವರನ್ನು ರಕ್ಷಣೆ ಮಾಡುವ ಕಾನೂನು ಅಗತ್ಯ ಇತ್ತು. ಇಂತಹ ಕಾನೂನಿಂದ ಜನರ ರಕ್ಷಣೆಯನ್ನು ಕಾನೂನು ಚೌಕಟ್ಟಿನ ಒಳಗೆ ತಂದಂತಾಯಿತು ಎಂದು ಎಚ್.ಕೆ. ಪಾಟೀಲ ಹೇಳಿದರು.

> ಈ ಸುಗ್ರೀವಾಜ್ಞೆ ಮೂಲಕ ಸಾಲಗಾರನ ಜೀವನದ ಘನತೆಯನ್ನು ಕಾಪಾಡಿ, ಬಡಜನರ ಶೋಷಣೆಯನ್ನು ತಡೆಯಲು ಅನುಕೂಲವಾಗಿದ್ದು, ಸಮಾಜದಲ್ಲಿರುವ ಬಡವರ ರಕ್ಷಣೆಗೆ ಸಹಾಯಕವಾಗಿದೆ. ಸಾಲ ಪಡೆದವರು ಬದುಕಿನಲ್ಲಿ ಅಂಜದೆ ಸಮಾಧಾನದ ಬದುಕು ನಡೆಸಬಹುದಾಗಿದೆ. ಜನರಿಗೆ ಕಿರುಕುಳ ನೀಡದೇ ನಿಯಮಾನುಸಾರ ಬಡ್ಡಿ ಪಡೆಯುವರಿಗೆ, ಬ್ಯಾಂಕ್‌ಗಳಿಗೆ ಈ ಸುಗ್ರೀವಾಜ್ಞೆಯಿಂದ ತೊಂದರೆ ಆಗುವುದಿಲ್ಲ. ಕಾನೂನಾತ್ಮಕ ವ್ಯವಹಾರಕ್ಕೆ ಸ್ವಾಗತ ಇದ್ದೇ ಇದೆ.
>
> – ಎಚ್.ಕೆ. ಪಾಟೀಲ.
> ಕಾನೂನು ಸಚಿವರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಡಿಸಿಎಫ್ ಸಂತೋಷಕುಮಾರ, ಸಿದ್ದು ಪಾಟೀಲ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ ಸೇರಿದಂತೆ ಇತರರು ಇದ್ದರು.

### ಎಸ್‌ಎಸ್‌ಎಲ್‌ಸಿ ವಿಭಾಗ ಮಟ್ಟದ ಪೂರ್ವಭಾವಿ ಪರೀಕ್ಷೆಯಲ್ಲಿ 411 ವಿದ್ಯಾರ್ಥಿಗಳು ಫೇಲ್?

# ಪ್ರಯತ್ನದ ನಂತರವೂ ಕಾಣದ ದಾರಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸರಕಾರ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಹಲವಾರು ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ಅದಕ್ಕಾಗಿ ಸತತ ಪರೀಕ್ಷೆಗಳನ್ನು ಸಹ ಆಯೋಜಿಸುತ್ತಿದ್ದು, ಕಳೆದ ಜನವರಿ 25ರಂದು ನಡೆಸಿದ ವಿಭಾಗಮಟ್ಟದ ಪೂರ್ವಭಾವಿ ಪರೀಕ್ಷೆಯಲ್ಲಿ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳಲ್ಲಿ ವಿದ್ಯಾರ್ಥಿಗಳು ಫೇಲ್ ಆಗಿದ್ದಾರೆ.

ಶಿರಹಟ್ಟಿಯ ಬಿಇಓ ನೀಡಿದ ಅಂಕಿ-ಅಂಶದ ಪ್ರಕಾರ, ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕಿನಲ್ಲಿ 10ನೇ ತರಗತಿಗೆ ಸರಕಾರಿ ಶಾಲೆಗಳ ಪೈಕಿ 1446 ವಿದ್ಯಾರ್ಥಿಗಳು ವಿಭಾಗ ಮಟ್ಟದ ಪರೀಕ್ಷೆಗೆ ಹಾಜರಾಗಿದ್ದರು. ಇವರಲ್ಲಿ 1224 ವಿದ್ಯಾರ್ಥಿಗಳು ಉತ್ತೀರ್ಣ ಮತ್ತು 222 ವಿದ್ಯಾರ್ಥಿಗಳು

> ಈ ಹಿಂದೆ ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕುಗಳಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಸೇವೆ ಸಲ್ಲಿಸಿ ಜನಮಾನಸದಲ್ಲಿ ಉಳಿದಿರುವ ಆರ್.ಎಸ್. ಬುರಡಿ ಅವರು ಪದೋನ್ನತಿ ಹೊಂದಿ ಇತ್ತೀಚೆಗೆ ಇಲಾಖೆಯ ಉಪನಿರ್ದೇಶಕರಾಗಿ ಸೇವೆಯನ್ನು ಸಲ್ಲಿಸುತ್ತಿದ್ದು, ಪೂರ್ವಭಾವಿ ಪರೀಕ್ಷೆಯಲ್ಲಿ ಇಷ್ಟೊಂದು ವಿದ್ಯಾರ್ಥಿಗಳು ಫೇಲ್ ಆಗಿದ್ದಕ್ಕೆ ಸೂಕ್ತ ಪರಿಶೀಲನೆ ನಡೆಸಿ ಮುಂದಿನ ದಿನಗಳಲ್ಲಿ ಫಲಿತಾಂಶ ಸುಧಾರಣೆಗೆ ಅಗತ್ಯ ಕ್ರಮ ವಹಿಸುವುದಕ್ಕೆ ಗಮನ ಹರಿಸಬೇಕೆಂಬುದು ಅವರ ಆಪ್ತವಲಯದಲ್ಲಿ ಕೇಳಿ ಬರುತ್ತಿದೆ.



ಅನುತ್ತೀರ್ಣರಾಗಿದ್ದಾರೆ. ಅನುದಾನಿತ ಶಾಲೆಗಳ ಪೈಕಿ 811 ವಿದ್ಯಾರ್ಥಿಗಳಲ್ಲಿ 670 ವಿದ್ಯಾರ್ಥಿಗಳು ಉತ್ತೀರ್ಣ, 141 ವಿದ್ಯಾರ್ಥಿಗಳು ಅನುತ್ತೀರ್ಣರಾಗಿದ್ದಾರೆ.


ಅನುದಾನರಹಿತ ಶಾಲೆಗಳ ಪೈಕಿ 398 ವಿದ್ಯಾರ್ಥಿಗಳಲ್ಲಿ 350 ವಿದ್ಯಾರ್ಥಿಗಳು ಉತ್ತೀರ್ಣ, 48 ವಿದ್ಯಾರ್ಥಿಗಳು ಅನುತ್ತೀರ್ಣ ಹೀಗೆ ಒಟ್ಟು 2800 ವಿದ್ಯಾರ್ಥಿಗಳಲ್ಲಿ 2655 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಅದರಲ್ಲಿ 2244 ವಿದ್ಯಾರ್ಥಿಗಳು ಉತ್ತೀರ್ಣ ಹಾಗೂ 411 ವಿದ್ಯಾರ್ಥಿಗಳು ಅನುತ್ತೀರ್ಣರಾಗಿದ್ದಾರೆ. ಇದರಲ್ಲಿ ಕೆಲವು ಪ್ರೌಢಶಾಲೆಗಳಲ್ಲಿ ಶೇಕಡಾವಾರು ಹೆಚ್ಚಿಗೆ ಇದ್ದು, ಇನ್ನೂ ಕೆಲವು ಕಡೆಗಳಲ್ಲಿ ಇನ್ನೂ ಹೆಚ್ಚಿನ ಪ್ರಗತಿ ಆಗಬೇಕಿದೆ.

> ಈ ಕುರಿತು ಪ್ರತಿಕ್ರಿಯಿಸಿದ ಬಿಇಓ ಎಚ್.ಎನ್. ನಾಯ್ಕ, ಪ್ರತಿ ಪ್ರೌಢಶಾಲೆಗೆ ಈಗಾಗಲೇ 3-4 ಬಾರಿ ಭೇಟಿ ನೀಡಲಾಗಿದೆ. ನಿಧಾನಗತಿಯ ಮಕ್ಕಳ ಪ್ರಗತಿಗೆ 4 ಕೇಂದ್ರಗಳಲ್ಲಿ ಹೆಚ್ಚಿನ ತರಬೇತಿ ನೀಡಲಾಗುತ್ತಿದೆ. ಇಲಾಖೆಯ ಸುಧಾರಣೆ ಕ್ರಮಗಳು ಸಹ ನಿರಂತರವಾಗಿ ನಡೆಯುತ್ತಿವೆ ಎಂದರು.

ಫಲಿತಾಂಶ ಸುಧಾರಣೆಗೆ ಶಿಕ್ಷಣ ಇಲಾಖೆಯು ವೇಕ್ ಅಪ್ ಕಾಲ್ ಮೂಲಕ ಬೆಳಿಗ್ಗೆ 5 ಗಂಟೆ ನಂತರ ವಿದ್ಯಾರ್ಥಿಗಳಿಗೆ ಮೊಬೈಲ್ ಮೂಲಕ ಕಾಲ್ ಮಾಡಿ ಎಬ್ಬಿಸಿ ಓದಲು ಹಚ್ಚುವುದು, ಪ್ರತಿಭಾವಂತ ವಿದ್ಯಾರ್ಥಿಗಳಿಂದ ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ಪ್ರೇರಣೆ, ಮನೆ ಮನೆ ಭೇಟಿ, ವಿಶೇಷ ತರಗತಿಗಳು ಹೀಗೆ ಹಲವು ಕಾರ್ಯಕ್ರಮಗಳು ನಡೆಯುತ್ತಿವೆ.

ವಿದ್ಯಾರ್ಥಿ ಜೀವನದಲ್ಲಿ ಎಸ್‌ಎಸ್‌ಎಲ್‌ಸಿ ಪ್ರಮುಖ ಘಟ್ಟವಾಗಿದ್ದರಿಂದ ವಿದ್ಯಾರ್ಥಿಗಳ ಶಿಕ್ಷಣದ ಗುಣಮಟ್ಟ ಹೆಚ್ಚಳಕ್ಕೆ ಸರಕಾರ ಈಗಾಗಲೇ ಎಲ್ಲ ರೀತಿಯ ಸೌಲಭ್ಯಗಳನ್ನು ನೀಡುತ್ತಿದೆ. ಆದಾಗ್ಯೂ ಇಷ್ಟೊಂದು ಪ್ರಮಾಣದಲ್ಲಿ ವಿದ್ಯಾರ್ಥಿಗಳು ಇಲಾಖೆ ನಡೆಸುವ ಇಂತಹ ಪೂರ್ವಭಾವಿ ಪರೀಕ್ಷೆಯಲ್ಲಿ ಫೇಲ್ ಆಗಿದ್ದಕ್ಕೆ ಕಾರಣ ಏನು, ಇದಕ್ಕೆ ಯಾರು ಹೊಣೆ ಎಂಬುದಕ್ಕೆ ಸಂಬಂಧಿಸಿದ ಇಲಾಖೆಯ ಹಿರಿಯ ಅಧಿಕಾರಿಗಳೇ ಉತ್ತರಿಸಬೇಕಿದೆ.

## ತ್ರೀಡಿ ಕೀ ಹೋಲ್ ಆಪರೇಷನ್ ಕಾರ್ಯಾಗಾರ ಫೆ.15ಕ್ಕೆ




■ ವಿಜಯಸಾಕ್ಷಿ ಸುದ್ದಿ, ಗದಗ

ಎಲ್.ವೈ. ದೇಸಾಯಿ ಸ್ಮಾರಕ ಸ್ಪರ್ಶ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ ಗದಗ ಸ್ತ್ರೀರೋಗ ತಜ್ಞರ ಸಂಘದ ವತಿಯಿಂದ ಫೆ.15 ಮತ್ತು 16ರಂದು ತ್ರೀಡಿ ಕೀ ಹೋಲ್ ಆಪರೇಷನ್ ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ಡಾ. ಪ್ರಭಾ ದೇಸಾಯಿ ತಿಳಿಸಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಎರಡು ದಿನಗಳ ಕಾಲ ನಡೆಯುವ ಕಾರ್ಯಾಗಾರದಲ್ಲಿ ಯುವ ವೈದ್ಯರು, ತಜ್ಞ ವೈದ್ಯರು ಭಾಗವಹಿಸಲಿದ್ದಾರೆ. ವಿವಿಧ ಕಾಯಿಲೆಗಳನ್ನು ಗುಣಪಡಿಸಲು ಬಳಸುವ ತ್ರೀಡಿ ಕೀ ಹೋಲ್ ಶಸ್ತ್ರಚಿಕಿತ್ಸೆ ಕುರಿತಾಗಿ ತಜ್ಞರು ಯುವ ವೈದ್ಯರಿಗೆ ಹೆಚ್ಚಿನ ಜ್ಞಾನ ಒದಗಿಸಲಿದ್ದಾರೆ ಎಂದು ತಿಳಿಸಿದರು.

ಉತ್ತರ ಕರ್ನಾಟಕ ಭಾಗದಲ್ಲಿ ಇದೇ ಮೊದಲಬಾರಿಗೆ ಈ ರೀತಿಯ ಕಾರ್ಯಾಗಾರ ನಡೆಯುತ್ತಿದೆ. ಇದು ಗದಗ ವೈದ್ಯಕೀಯ ಕ್ಷೇತ್ರದಲ್ಲಿ ಮೈಲುಗಲ್ಲು ಸೃಷ್ಟಿಸಲಿದೆ. ಮೊದಲ ಬಾರಿಗೆ ಗರ್ಭಕೋಶ ಕಸಿ ಮಾಡಿದ ಖ್ಯಾತಿಯ ಡಾ. ಶೈಲೇಶ್ ಪುಂತಾಂಬೇಕರ್ ಸೇರಿದಂತೆ ಡಾ. ಬಿ.ರಮೇಶ್, ಮುಂಬೈನ ಡಾ. ವಿವೇಕ್ ಸಾಲುಂಕೆ, ಡಾ. ನಿತಿನ್ ಶಾ, ಡಾ. ಸುಧಾ ಟಂಡನ್, ಡಾ. ಗುರುಪ್ರಸಾದ್, ಡಾ. ಧನೇಶ್ ದೇಸಾಯಿ ಉಪನ್ಯಾಸ ನೀಡಲಿದ್ದಾರೆ. ವೈದ್ಯಕೀಯ ಜಗತ್ತಿನಲ್ಲಿ ಕ್ಲಿಷ್ಟಕರ ಎನಿಸುವ ಶಸ್ತ್ರಚಿಕಿತ್ಸೆಗಳನ್ನು ತಜ್ಞರು ಮಾಡಿ ತೊರಿಸಲಿದ್ದಾರೆ ಎಂದರು.

ನಗರದ ಕಾರ್ಕ್ ಇನ್ ಹೋಟೆಲ್‌ನಲ್ಲಿ ಉಪನ್ಯಾಸ ಕಾರ್ಯಕ್ರಮಗಳು ನಡೆಯಲಿವೆ. ಶಸ್ತ್ರಚಿಕಿತ್ಸೆಗಳು ಸ್ಪರ್ಶ್ ಆಸ್ಪತ್ರೆಯಲ್ಲಿ ನಡೆಯಲಿವೆ. ಫೆ.15ರಂದು ಸಂಜೆ 6.30ಕ್ಕೆ ಸಚಿವ ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಡಾ. ಶಶಿಧರ್ ರೇಶ್ಮೆ, ಡಾ. ಧನೇಶ್ ದೇಸಾಯಿ, ಡಾ. ಪ್ರವೀಣ್ ಸಜ್ಜನರ್ ಇದ್ದರು.

### ಸಾಲಗಾರನ ದೂರಿನ ಮೇರೆಗೆ ಗದಗ-ಬೆಟಗೇರಿಯ 13 ಕಡೆ ದಾಳಿ ನಡೆಸಿದ ಪೊಲೀಸರು

# ಬಡ್ಡಿ ದಂಧೆಕೋರರ ಲೆಕ್ಕಾಚಾರ ಚುಕ್ತಾ!

■ ವಿಜಯಸಾಕ್ಷಿ ಸುದ್ದಿ, ಗದಗ

ಜನ ಸಾಮಾನ್ಯರ ಜೀವ ಹಿಂಡುತ್ತಿರುವ ಅಕ್ರಮ ಬಡ್ಡಿ ದಂಧೆಕೋರರ ಮನೆ ಮೇಲೆ ಗದಗ ಜಿಲ್ಲಾ ಪೊಲೀಸರು ದಾಳಿ ನಡೆಸಿ ಬಿಸಿ ಮುಟ್ಟಿಸುವ ಕಾರ್ಯಾಚರಣೆ ಮುಂದುವರೆಸಿದ್ದಾರೆ. ಬುಧವಾರ ಬೆಟಗೇರಿ ಭಾಗದಲ್ಲಿ ಒಟ್ಟು 13 ಕಡೆ ದಾಳಿ ನಡೆಸಿ, ಕೋಟ್ಯಾಂತರ ರೂ. ಹಣ, ಬಂಗಾರ, ದಾಖಲೆ ಪತ್ರಗಳನ್ನು ವಶಪಡಿಸಿಕೊಂಡಿದ್ದಾರೆ.

ಈ ಕುರಿತು ಬೆಟಗೇರಿ ಪೊಲೀಸ್ ಠಾಣೆಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಬೆಟಗೇರಿಯ ಅಶೋಕ ಗಣಾಚಾರಿ ಅವರು ನೀಡಿದ ದೂರಿನ ಆಧಾರದಲ್ಲಿ ಈ ದಾಳಿ ನಡೆಸಲಾಗಿದೆ. ಬೆಟಗೇರಿಯ ಯಲ್ಲಪ್ಪ ಮಿಸ್ಕಿನ್ ಎನ್ನುವ ಬಡ್ಡಿ ದಂಧೆಕೋರ ವ್ಯಕ್ತಿಗೆ ಸಂಬಂಧಿಸಿದ ಮನೆ, ಸಂಬಂಧಿಕರ ಮನೆ ಸಹಿತ ಒಟ್ಟು 13 ಕಡೆ ದಾಳಿ ನಡೆಸಲಾಗಿದೆ. ದಾಳಿಯಲ್ಲಿ



> ದೂರುದಾರ ಅಶೋಕ ಗಣಾಚಾರಿ, ಆರೋಪಿ ಯಲ್ಲಪ್ಪ ಮಿಸ್ಕಿನ್ ಬಳಿ 1.90 ಕೋಟಿ ರೂ. ಸಾಲ ಪಡೆದಿದ್ದರು. 2016 ಮಾರ್ಚ್ 10ರಿಂದ 2025 ಜನವರಿ 10ರ ಒಳಗಾಗಿ 1.40 ಕೋಟಿ ರೂ. ಸಾಲ ಮರುಪಾತಿಸಿದ್ದಾರೆ. ಇನ್ನು 50 ಲಕ್ಷ ರೂ. ಸಾಲ ಬಾಕಿ ಇತ್ತು. ಆದರೂ ಆರೋಪಿ ಯಲ್ಲಪ್ಪ ಮಿಸ್ಕಿನ್ ಜೀವ ಬೆದರಿಕೆ ಹಾಕಿ, ಅಶೋಕ ಅವರಿಂದ ಕೋಟ್ಯಾಂತರ ರೂ. ಮೌಲ್ಯದ ಆಸ್ತಿ, ಕಲ್ಯಾಣ ಮಂಟಪವನ್ನು ಬರೆಯಿಸಿಕೊಂಡಿದ್ದರು. ಇಷ್ಟಾಗಿಯೂ ಖಾಲಿ ಚೆಕ್‌ಗಳನ್ನು, ಬಾಂಡ್‌ಗಳನ್ನು ಉಪಯೋಗಿಸಿಕೊಂಡು ಮಾನಸಿಕ ಹಿಂಸೆ ನೀಡುತ್ತಿದ್ದ. ಈ ಬಗ್ಗೆ ಅಶೋಕ ಗಣಾಚಾರಿ ನೀಡಿದ ದೂರು ಆಧರಿಸಿ ದಾಳಿ ನಡೆಸಿ, ನಗದು, ಬಂಗಾರ, ದಾಖಲೆಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಎಸ್‌ಪಿ ಬಿ.ಎಸ್. ನೇಮಗೌಡ ಮಾಹಿತಿ ನೀಡಿದರು.

4.90 ಕೋಟಿ ರೂ.ನಗದು, 992 ಗ್ರಾಂ ಬಂಗಾರ, 600 ಬ್ಯಾಂಕ್ ಚೆಕ್ಕುಗಳು, 650 ಬಾಂಡ್, 9 ಬ್ಯಾಂಕ್ ಪಾಸ್‌ಬುಕ್, 4 ಎಟಿಎಂ ಕಾರ್ಡ್, 2 ಎಲ್‌ಐಸಿ ಬಾಂಡ್ ಸೇರಿದಂತೆ 65 ಲೀಟರ್ ಮದ್ಯ ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಮುಖ ಆರೋಪಿ ಯಲ್ಲಪ್ಪ ಮಿಸ್ಕಿನ್, ವಿಕಾಸ ಮಿಸ್ಕಿನ್, ಮಂಜು ಶ್ಯಾವಿ, ಈರಣ್ಣ ಬೂದಿಹಾಳ, ಮೋಹನ ಎನ್ನುವ ವ್ಯಕ್ತಿಗಳ ವಿರುದ್ಧ ದೂರು ದಾಖಲಿಸಿಕೊಂಡು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ದಾಳಿ ವೇಳೆ ಅನೇಕ ದಾಖಲೆಪತ್ರಗಳು, ವಾಹನಗಳ ಕೀಲಿಕೈ ಸಹ ಸಿಕ್ಕಿವೆ. ಎಲ್ಲ ದಾಖಲೆಗಳ ಪರಿಶೀಲನೆ ನಡೆಯುತ್ತಿದೆ. ದಾಳಿಗೆ ಸಹಕಾರ ಸಂಘಗಳ ಅಧಿಕಾರಿಗಳು ನೆರವು ನೀಡಿದ್ದಾರೆ. ಆದಾಯ ತೆರಿಗೆ ಇಲಾಖೆಗೂ ದಾಳಿಯ ಬಗ್ಗೆ ಮಾಹಿತಿ ನೀಡಲಾಗಿದೆ ಎಂದು ಎಸ್ಪಿ ತಿಳಿಸಿದರು.

ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಂ.ಬಿ. ಸಂಕದ ಮಾರ್ಗದರ್ಶನದಲ್ಲಿ, ಮಹಾಂತೇಶ ಸಜ್ಜನ ಹಾಗೂ ಜೆ.ಎಚ್. ಇನಮಾದಾರ ನೇತೃತ್ವದಲ್ಲಿ ಸಂಗಮೇಶ ಶಿವಯೋಗಿ, ಧೀರಜ್ ಶಿಂಧೆ, ಸಿದ್ರಾಮೇಶ್ವರ ಗಡಾದ, ಎಲ್. ಎಮ್. ಆರಿ, ಆರ್.ಸಿ. ದೊಡ್ಡಮನಿ, ನಾಗರಾಜ ಗಡದ, ಚನ್ನಯ್ಯ ಬೇವೂರ, ಎಲ್.ಕೆ. ಜೂಲಕಟ್ಟಿ, ಮಾರುತಿ, ಜೊಂಗದಂಡಕರ, ಸೋಮನಗೌಡ ಗೌಡರ, ಶಂಕುಂತಲಾ ನಾಯಕ, ಐಶ್ವರ್ಯ ನಾಗರಾಳ, ಗಿರೀಶ ಎಮ್. ಹಾಗೂ ಸಿಬ್ಬಂದಿ ಸಹಕಾರದೊಂದಿಗೆ ದಾಳಿ ನಡೆಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ತಿಳಿಸಿದರು.

## ಸಂಪಾದಕೀಯ

# ಸುಗ್ರೀವಾಜ್ಞೆಯಿಂದ ಶೋಷಣೆ ಮುಕ್ತರಾಗಲಿ ಬಡ ಸಾಲಗಾರರು

ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅಧ್ಯಾದೇಶ 2025ಕ್ಕೆ ಕೊನೆಗೂ ರಾಜ್ಯಪಾಲರು ಅಂಕಿತ ಹಾಕಿದ್ದಾರೆ.

ರಾಜ್ಯದಲ್ಲಿ ಮೈಕ್ರೋಫೈನಾನ್ಸ್ ಹಾಗೂ ಲೇವಾದೇವಿಗಾರರು ವಿಧಿಸುವ ದುಬಾರಿ ಬಡ್ಡಿ ದರಗಳು, ಬಲವಂತದ ವಸೂಲಾತಿ ವಿಧಾನದಿಂದ ಆರ್ಥಿಕವಾಗಿ ದುರ್ಬಲರಾದ ಸಾಲಗಾರರನ್ನು ಕಿರುಕುಳದಿಂದ ತಪ್ಪಿಸುವ ಸುಗ್ರೀವಾಜ್ಞೆಗೆ ಅಂಕಿತ ಬಿದ್ದಿರುವುದು ಬಡ ಸಾಲಗಾರರಲ್ಲಿ ಭರವಸೆ ಮೂಡಿಸಿದೆ.

ಈ ಹೊಸ ಕಾಯಿದೆ ಜಾರಿ ಮೂಲಕ ಇನ್ನು ಮುಂದೆ ರಾಜ್ಯದಲ್ಲಿ ಬಲವಂತದ ಸಾಲ ವಸೂಲಾತಿಗೆ ದೊಡ್ಡ ಮಟ್ಟದ ಹೊಡೆತ ಬೀಳಲಿದೆ. ಆರ್ ಬಿಐ ಅಡಿ ನೋಂದಾಯಿತಗೊಂಡ ಆರ್ಥಿಕ ಸಂಸ್ಥೆಗಳನ್ನು ಹೊರತುಪಡಿಸಿ, ಇನ್ನುಳಿದ ಎಲ್ಲ ರೀತಿಯ ಲೇವಾದೇವಿ ವ್ಯವಹಾರ ನಡೆಸುವ ವ್ಯಕ್ತಿಗಳು, ಸಂಸ್ಥೆಗಳು ಇನ್ನು ಮುಂದೆ ಬಲವಂತವಾಗಿ ಸಾಲ ವಸೂಲಿ ಮಾಡಿದರೆ ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ.

ರಾಜ್ಯದಲ್ಲಿ ಈಚೆಗೆ ಮೈಕ್ರೋ ಫೈನಾನ್ಸ್ ಕಿರುಕುಳದ ಅನೇಕ ಘಟನೆಗಳು ಬೆಳಕಿಗೆ ಬಂದ ನಂತರ ಸರಕಾರ ಅದಕ್ಕೆ ಕಡಿವಾಣ ಹಾಕಲು ಮುಂದಾಯಿತು. ಸುಗ್ರೀವಾಜ್ಞೆ ಮೂಲಕ ಖಾಸಗಿ ಲೇವಾದೇವಿಗಾರರ ಶೋಷಣೆ ತಪ್ಪಿಸಲು ಮುಂದಾಯಿತು. ಆದರೆ ರಾಜ್ಯಪಾಲರು ಸರಕಾರದ ಸುಗ್ರೀವಾಜ್ಞೆಗೆ ಕೆಲ ಸ್ಪಷ್ಟನೆ ಕೋರಿದ್ದರು. ಸರಕಾರ ಸಕಾಲದಲ್ಲಿ ಅದಕ್ಕೆ ಉತ್ತರ ನೀಡಿದ್ದರಿಂದ ರಾಜ್ಯಪಾಲರು ಅದಕ್ಕೆ ಅಂಕಿತ ಹಾಕಿದರು.

ಈ ಸುಗ್ರಿವಾಜ್ಞೆ ಕೇವಲ ಮಹಿಳೆಯರು, ಕಾರ್ಮಿಕರು ಸಹಿತ ಒಟ್ಟಾರೆ ನಿಶ್ಚಿತ ಆದಾಯ ಇಲ್ಲದವರು ಮಾಡಿರುವ ಸಾಲದಿಂದ ಶೋಷಣೆಗೆ ಒಳಗಾಗಿದ್ದರೆ ಅಂಥವರಿಗೆ ಮಾತ್ರ ನ್ಯಾಯ ಒದಗಿಸುವ ಕೆಲಸ ಮಾಡುತ್ತಿದೆ. ಸರಕಾರ ಮತ್ತು ರಾಜ್ಯಪಾಲರ ನಿರ್ಧಾರ ಸ್ವಾಗತಾರ್ಹ.

## ವಿಮಾನ "ಅಪಹರಿಸಿದ ಬೆಕ್ಕು": ಹಾರಾಟ 2 ದಿನ ವಿಳಂಬ

■ ವಿಜಯಸಾಕ್ಷಿ ಸುದ್ದಿ, ರೋಮ್

ಬೆಕ್ಕೊಂದು ರಯಾನ್‌ಏರ್ ಜೆಟ್‌ನೊಳಗೆ ನುಸುಳಿ ನಂತರ ವಿಮಾನ ಬಿಟ್ಟು ಹೊರಬರಲು ನಿರಾಕರಿಸಿದ್ದರಿಂದ ನಿರ್ದಿಷ್ಟವಾಗಿ ಬೆಕ್ಕು ವಿಮಾನವನ್ನು ಅಪಹರಿಸಿದ ಘಟನೆ ರೋಮ್ ನಲ್ಲಿ ನಡೆದಿದೆ. ಕಳೆದ ವಾರ ರೋಮ್‌ನಿಂದ ಜರ್ಮನಿಗೆ ಹಾರಾಟಕ್ಕೆ ಬೋಯಿಂಗ್ 737 ವಿಮಾನ ನಿಗದಿಯಾಗಿತ್ತು. ಆದರೆ ವಿಮಾನ ಹಾರಾಟ ನಡೆಸುವ ಮೊದಲು ಸಿಬ್ಬಂದಿಗೆ ವಿಮಾನದಿಂದ ಮಿಯಾಂವ್ ಶಬ್ದ ಕೇಳಿ ಬರುತ್ತಿತ್ತು ಎಂದು ನ್ಯೂಯಾರ್ಕ್ ಪೋಸ್ಟ್ ವರದಿ ಮಾಡಿದೆ.

ಶಬ್ದದ ಮೂಲವನ್ನು ಹುಡುಕುತ್ತಾ ವಿಮಾನ ಸಿಬ್ಬಂದಿ ವಿಮಾನದಿಂದ ಹಲವಾರು ಅಂಚುಪಟ್ಟಿಗಳನ್ನು ಸಹ ತೆಗೆದುಹಾಕಿದರು. ಅಂತಿಮವಾಗಿ ಅವರು ವಿಮಾನದ 'ಎಲೆಕ್ಟ್ರಿಕಲ್ ಬೇ' ನಲ್ಲಿ ಹುಡುಕಿದಾಗ ಒಳಗೆ ಅಡಗಿರುವ ಬೆಕ್ಕು ಕಂಡುಬಂದಿತು.

### ಜಾತ್ರೆ ನೆಪದಲ್ಲಿ ಸಾಮಾಜಿಕ ಪರಿವರ್ತನೆ ಮಾಡಿ ಸಾಮರಸ್ಯದ ತೇರು ಎಳೆಯುತ್ತಿರುವ ತೋಂಟದ ಡಾ.ಸಿದ್ಧರಾಮ ಸ್ವಾಮೀಜಿ

# ಭಾವೈಕ್ಯತೆಯ ತೇರನ್ನೆಳೆಯೋಣ ಬನ್ನಿ...

■ ವಿಜಯಸಾಕ್ಷಿ ಸುದ್ದಿ, ಡಂಬಳ

ಡಂಬಳದ ಶ್ರೀಮದರ್ಧನಾರೀಶ್ವರ ದೇವರ 285ನೇ ಜಾತ್ರಾ ಮಹೋತ್ಸವದ ರಥೋತ್ಸವವು ಫೆ.13 ಹಾಗೂ 14 ರಂದು ಲಘು ರಥೋತ್ಸವ ವಿಜ್ರಂಭಣೆಯಿಂದ ನಡೆಯಲಿದೆ.


ಮೌಢ್ಯ, ಅಂಧಕಾರದಲ್ಲಿ ಮುಳಗಿ ಅಜ್ಞಾನದ ಮಡುವಿನಲ್ಲಿರುವ ಸಮಾಜದ ಕೊಳೆ ತೊಳೆಯುವ ನಿಟ್ಟಿನಲ್ಲಿ ತೋಂಟದ ಡಾ. ಸಿದ್ಧಲಿಂಗ ಸ್ವಾಮೀಜಿಗಳ ನಂತರ ತೋಂಟದ ಡಾ. ಸಿದ್ಧರಾಮ ಸ್ವಾಮೀಜಿ ಅವರು ಜಾತ್ರೆಗೆ ಹೊಸ ಮೆರಗು ನೀಡುವ ನಿಟ್ಟಿನಲ್ಲಿ ವೈಚಾರಿಕತೆ ತೇರು ಎಳೆಯಲು ಭಕ್ತರಿಗೆ ಅನುಕೂಲ ಕಲ್ಪಿಸಿದ್ದಾರೆ.

ರಾಷ್ಟ್ರೀಯ ಮಟ್ಟದಲ್ಲಿ ಕೋಮು ಸೌಹಾರ್ದತೆ ಮೆರೆದಿರುವ ಎಡೆಯೂರ-ಡಂಬಳ-ಗದಗ ತೋಂಟದಾರ್ಯ ಮಠವನ್ನು ಲಿಂ. ಡಾ. ಸಿದ್ಧಲಿಂಗ ಸ್ವಾಮೀಜಿಯವರ ಮಠ ಎಂಬ ಪರಿಕಲ್ಪನೆಗೆ ಹೊಸ ಭಾಷ್ಯ ಬರೆದಿದ್ದರು. ನಂತರ ಜಗದ್ಗುರು ಡಾ.ಸಿದ್ಧರಾಮ ಮಹಾಸ್ವಾಮಿಗಳು ಇಂಗ್ಲಿಷೇತರ ಭಾಷೆಗಳಿಂದ ಕನ್ನಡಕ್ಕೆ ಅನುವಾದನೆ ಮಾಡಿರುವ ಕೃತಿಯಾಗಿರುವ ತೌಲನಿಕ ಧರ್ಮದರ್ಶನ ಅನುವಾದ ಮಾಡವುದರ ಮೂಲಕ ಕುವೆಂಪು ಭಾಷಾ ಭಾರತಿ ಗೌರವ ಪ್ರಶಸ್ತಿಗೆ ಭಾಜಿನರಾಗಿರುವ ಡಾ. ತೋಂಟದ ಸಿದ್ಧರಾಮ ಶ್ರೀಗಳು ಮಠಗಳು ಸಾಮಾನ್ಯರ ನೋವು-ನಲಿವುಗಳಿಗೆ ಸ್ಪಂದಿಸಬೇಕು. ದೇಶಕ್ಕೆ ಬಡತನ, ನಿರುದ್ಯೋಗ, ಮತೀಯ ಗಲಭೆಗಳು, ಭಾಷೆ-ಗಡಿ ಸಮಸ್ಯೆಗಳು ಏಕತೆಗೆ ಧಕ್ಕೆ ತರುತ್ತವೆ ಎಂದು ಅರಿತು ಜಾತ್ರೆಗಳಲ್ಲಿ ಸಾಹಿತ್ಯ ಸಮ್ಮೇಳನ, ವಿಚಾರಗೋಷ್ಠಿ, ಉಪನ್ಯಾಸ, ಸಾಂಸ್ಕೃತಿಕ ಕಾರ್ಯಗಳ ಮೂಲಕ ಜನತೆಯಲ್ಲಿ ಸಮಗ್ರತೆ ಕಾಪಾಡುವ ಕೈಂಕರ್ಯದಲ್ಲಿ ತೋಂಟದಾರ್ಯ ಮಠ ತೊಡಗಿಸಿಕೊಂಡಿದೆ.

ಲಿಂ. ಡಾ. ಸಿದ್ಧಲಿಂಗ ಶ್ರೀಗಳಂತೆ ತೋಂಟದ ಡಾ. ಸಿದ್ಧರಾಮ ಶ್ರೀ ಪೀಠಾರೋಹಣ ಮಾಡಿದ ನಂತರ ಬಸವಣ್ಣವರ ಸಮಾನತೆಯ ಕನಸನ್ನು ನನಸಾಗಿಸುವ ನಿಟ್ಟಿನಲ್ಲಿ ಅಡ್ಡಪಲ್ಲಕ್ಕಿಯಲ್ಲಿ ಸ್ವಾಮಿಗಳು ಮೆರೆಯಬಾರದು, ಮನುಷ್ಯರನ್ನು ಮನುಷ್ಯರು ಹೊರುವುದು ಹೀನ ಕೆಲಸ ಎಂದು ಪಲ್ಲಕ್ಕಿ ತ್ಯಾಗ ಮಾಡಿ, ಪಲ್ಲಕ್ಕಿ ಮುಂದೆ ಪಾದಚಾರಿಗಳಾಗಿ ಸಾಮಾನ್ಯ ಭಕ್ತರ ಮಧ್ಯೆ ಹೋಗುತ್ತಿದ್ದಾರೆ.

ಮೌಢ್ಯ, ಕಂದಾಚಾರ, ಸಮಾಜದ ಅವನತಿಗೆ ಕಾರಣ ಎಂದು ಮನಗಂಡು ಶಿಕ್ಷಣ, ಆರೋಗ್ಯ, ಪರಿಸರ, ನಾಡು ನುಡಿ ಪುಸ್ತಕ ಪ್ರಕಟಣೆ ಅನ್ನದಾಸೋಹ ಸೇರಿದಂತೆ ಜನಪರ ಕಾರ್ಯ ಕೈಗೊಂಡು ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸು ಎಂಬ ಬಸವಣ್ಣವರ ವಾಣಿಯನ್ನು ಸಾಕಾರಗೊಳಿಸಲು ಲಿಂ. ಡಾ. ಸಿದ್ಧಲಿಂಗ ಶ್ರೀಗಳಂತೆ ಸಿದ್ಧರಾಮ ಸ್ವಾಮೀಜಿಯವರು ಕೂಡಾ ಶಿವಾನುಭವ ಕಾರ್ಯಕ್ರಮಗಳ ಮೂಲಕ ಸಾಹಿತಿಗಳಿಗೆ, ಕಲಾವಿದರಿಗೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರನ್ನು ಗೌರವಿಸಿ ಬಸವಣ್ಣವರ ಅನುಭವ ಮಂಟಪದ ಸವಿ ಸಂಭ್ರಮಕ್ಕೆ ಮುನ್ನುಡಿ ಬರೆಯುತ್ತಿದ್ದಾರೆ.

ಜಾತಿ, ಮತ, ಪಂಥ ಬೇಧ-ಭಾವ ತೊರೆಯುವ ನಿಟ್ಟಿನಲ್ಲಿ ಮಠಗಳಲ್ಲಿ ಮಹಾತ್ಮರ, ದಾರ್ಶನಿಕರ, ಸಂತರ, ಆದರ್ಶ ಮೌಲ್ಯಗಳನ್ನು ಶಿವಾನುಭಗಳಲ್ಲಿ ನೆನೆದು ಭಕ್ತರ ನೆತ್ತಿಗೆ ಜ್ಞಾನದ ಬುತ್ತಿ ತುಂಬಿ ಮಠಗಳಲ್ಲಿ ಬುದ್ಧ, ಮಹಾವೀರ, ಅಂಬೇಡ್ಕರ್, ಕನಕದಾಸರು, ಮಡಿವಾಳ ಮಾಚಿದೇವ, ವಿವೇಕಾನಂದರು ಸೇರಿದಂತೆ ಮಹಾತ್ಮರ ವಿಚಾರಧಾರೆಗಳನ್ನು ನವ ಸಮಾಜಕ್ಕೆ ತಿಳಿಸುವ ಕೆಲಸ ನಿರಂತರವಾಗಿ ಮಾಡುತ್ತಿದ್ದಾರೆ.



### ಲಘು ರಥೋತ್ಸವ

ಫೆ.14ರಂದು ಸಂಜೆ 6.30ಕ್ಕೆ ಲಘು ರಥೋತ್ಸವ ತೋಂಟದ ಡಾ. ಸಿದ್ಧರಾಮ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಮಾಜಿ ಸಚಿವ ಎಸ್.ಎಸ್. ಪಾಟೀಲ, ಮಾಜಿ ಸಚಿವ ಕಳಕಪ್ಪ ಬಂಡಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಪಾಲ್ಗೊಳ್ಳುವರು. ಉತ್ತರ ಕರ್ನಾಟಕದ ಗಟ್ಟಿ ಆಹಾರ ರೊಟ್ಟಿ ಜಾತ್ರೆ ರಾತ್ರಿ 8ಕ್ಕೆ ನಡೆಯಲ್ಲಿದ್ದು, ಹಲವಾರು ಜಿಲ್ಲೆಯ ಜನರು ಕಡಕ್ ರೊಟ್ಟಿ ಸವಿ ಸವಿಯಲ್ಲಿದ್ದಾರೆ. ಕರ್ನಾಟಕದಲ್ಲಿ ವೈಚಾರಿಕತೆ ಜಾತ್ರೆ ಆಚಾರಣೆ ಮಾಡೋಣ ಬನ್ನಿ.

### ಜಾತ್ರೆಯ ವಿಶೇಷ

ಫೆ.13ರ ಸಂಜೆ ಮಘಾ ನಕ್ಷತ್ರದಲ್ಲಿ ತೋಂಟದಾರ್ಯ ಶ್ರೀಮದರ್ಧನಾರೀಶ್ವರ ತೇರು ಸಾಗಲಿದೆ. ಕಾರ್ಯಕ್ರಮದ ಸಾನ್ನಿಧ್ಯವನ್ನು ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮೀಜಿ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕ ಜಿ.ಎಸ್. ಪಾಟೀಲ, ಕೆ.ಸಿ.ಸಿ. ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಿವಲೀಲಾ ದೇವಪ್ಪ ಬಂಡಿಹಾಳ ಪಾಲ್ಗೊಳ್ಳಲಿದ್ದಾರೆ.

> ಲಿಂ. ಡಾ. ತೋಂಟದ ಸಿದ್ಧಲಿಂಗ ಶ್ರೀಗಳು ಹಾಕಿಕೊಟ್ಟ ಮಾರ್ಗದಂತೆ ಜಾತಿ, ಪಂಥ, ಮತಗಳ ಭೇದವಿಲ್ಲದೆ ಸಾವಿರಾರು ಭಕ್ತರು ಈ ಜಾತ್ರೆಯಲ್ಲಿ ಪಾಲ್ಗೊಳ್ಳುತ್ತಾರೆ. ಹೇಗೆ ಪರಿಸರದಲ್ಲಿ ಗಾಳಿ, ಮಳೆ, ಸೂರ್ಯನ ಕಿರಣಗಳಿಗೆ ಜಾತಿ, ಮತ, ಪಂಥ ಭೇದವಿಲ್ಲವೋ ಹಾಗೆಯೇ ಈ ಮಠದ ಭಕ್ತರು ರೊಟ್ಟಿ ತಯಾರಿಸುತ್ತಾರೆ. ಎಲ್ಲರೂ ಸೇರಿ ಸವಿಯುತ್ತಾರೆ. ಇದೇ ಭಾವೈಕ್ಯತೆಯ ಜಾತ್ಯಾತೀತ ರೊಟ್ಟಿ ಜಾತ್ರೆಯಾಗಿದೆ.
>
> – ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು.
> ಸಂಸ್ಥಾನಮಠ ಡಂಬಳ-ಗದಗ.



# ಪ್ರತಿಭಾ ಪುರಸ್ಕಾರ ವಿದ್ಯಾರ್ಥಿಗಳ ಸಾಧನೆಗೆ ಪ್ರೇರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿ ಜೀವನದಲ್ಲಿ ಶಿಕ್ಷಣ ಪ್ರಮುಖ ಘಟ್ಟವಾಗಿದೆ. ವಿದ್ಯಾರ್ಥಿಗಳು ಓದುವ ಆಸಕ್ತಿ ಬೆಳೆಸಿಕೊಂಡು ಉತ್ತಮ ಅಂಕ ಪಡೆದು, ಶಾಲೆಯ ಹಾಗೂ ಜಗತ್ತಿನ ಕೀರ್ತಿ ಹೆಚ್ಚಿಸಬೇಕು. ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್ ವತಿಯಿಂದ ನೀಡಲಾಗುವ ಪ್ರತಿಭಾ ಪುರಸ್ಕಾರದಿಂದ ವಿದ್ಯಾರ್ಥಿಗಳ ಓದಿಗೆ, ಶಿಕ್ಷಣಕ್ಕೆ ಅನುಕೂಲಕವಾಗಲಿ ಎಂದು ಕೆವಿಜಿ ಬ್ಯಾಂಕ್‌ನ ಪ್ರಾದೇಶಿಕ ಸಹಾಯಕ ವ್ಯವಸ್ಥಾಪಕರಾದ ಪ್ರಕಾಶ ಎ ಹೇಳಿದರು.

ಅವರು ನಗರದ ತೋಂಟದಾರ್ಯ ಮಠದ ಹತ್ತಿರ ಇರುವ ಕೆವಿಜಿ ಬ್ಯಾಂಕ್ ಪ್ರಧಾನ ಶಾಖೆಯ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಪಂಗಡಗಳ 8, 9 ಹಾಗೂ 10ನೇ ತರಗತಿಯಲ್ಲಿ ಉತ್ತಮ ಅಂಕ ಪಡೆದು ಶಾಲೆಗೆ ಪ್ರಥಮ ಸ್ಥಾನ ಗಳಿಸಿದ ವಿದ್ಯಾರ್ಥಿನಿಯರಿಗೆ ತಲಾ 5 ಸಾವಿರ ರೂಪಾಯಿಗಳ ಪ್ರತಿಭಾ ಪುರಸ್ಕಾರ ನೀಡಿ ಮಾತನಾಡಿದರು.

ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್ ವತಿಯಿಂದ ಗದಗ ತಾಲೂಕಿನ ಹೊಂಬಳ, ಅಸುಂಡಿ, ಬಿಂಕದಕಟ್ಟಿ, ಹುಲಕೋಟಿ, ಕುರ್ತಕೋಟಿ, ಹರ್ತಿ, ಸೊರಟೂರ, ಡಂಬಳ ಮುಂಡರಗಿ ಸುತ್ತಮುತ್ತಲಿನ ಗ್ರಾಮದಲ್ಲಿ ಸುಮಾರು 60 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿಲಾಯಿತು.

ಪ್ರಾದೇಶಿಕ ಕಛೇರಿ ಅಧಿಕಾರಿ ಶ್ರೀಪಾದರಾಜ ಹೊಂಬಳ ಮಾತನಾಡಿದರು.

ಈ ಸಂದರ್ಭದಲ್ಲಿ ವೈಭವ ಅಗರವಾಲ್, ಎಂ.ಆರ್. ನಾಯ್ಕ, ಎಸ್.ಜಿ. ಕುಲುಮಿ ಸೇರಿದಂತೆ ಗದಗ ತಾಲೂಕಿನ ಕೆವಿಜಿ ಬ್ಯಾಂಕ್‌ನ ವಿವಿಧ ಶಾಖೆಯ ವ್ಯವಸ್ಥಾಪಕರು, ಪಾಲಕರು, ಸಾರ್ವಜನಿಕರು ಹಾಗೂ ಸಿಬ್ಬಂದಿಗಳು ಹಾಜರಿದ್ದರು.



# ಆರ್‌ಎಮ್‌ಎಸ್‌ಎಸ್ ಕಾಲೇಜಿಗೆ ಅತ್ಯುತ್ತಮ ಫಲಿತಾಂಶ







■ ವಿಜಯಸಾಕ್ಷಿ ಸುದ್ದಿ, ಗದಗ

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಕರ್ನಾಟಕ ಬೆಂಗಳೂರು ಇದರ ವತಿಯಿಂದ ಡಿಸೆಂಬರ್-ಜನವರಿ 2024-25ನೇ ಸಾಲಿನಲ್ಲಿ ನಡೆದ ತೃತೀಯ ವರ್ಷದ ಬಿಎಸ್‌ಸಿ ನರ್ಸಿಂಗ್ ವಾರ್ಷಿಕ ಪರೀಕ್ಷೆಯ ಫಲಿತಾಂಶ ಪ್ರಕಟಗೊಂಡಿದ್ದು, ಇದರಲ್ಲಿ ಆರ್‌ಎಮ್‌ಎಸ್‌ಎಸ್ ಇನ್ಸಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್ ಕಾಲೇಜಿನ ವಿದ್ಯಾರ್ಥಿಗಳು ಅತ್ಯುತ್ತಮ ಫಲಿತಾಂಶ ಪಡೆದಿದ್ದಾರೆ.

ತೃತೀಯ ವರ್ಷದ ವಿದ್ಯಾರ್ಥಿನಿಯರಾದ ರಮ್ಯ ಹಿರೇಮಠ 594(84.57%) ಅಂಕಗಳೊಂದಿಗೆ ಕಾಲೇಜಿಗೆ ಪ್ರಥಮ ಸ್ಥಾನ, ದೀಪಾ ಜಿ 592(84.57%) ದ್ವಿತೀಯ ಸ್ಥಾನ, ಮಾಹೇಕ್ ಧಾರವಾಡ 582(83.14%) ತೃತೀಯ ಸ್ಥಾನ ಪಡೆದು ಉತ್ತೀರ್ಣರಾಗಿದ್ದಾರೆ. ಒಟ್ಟು 36 ವಿದ್ಯಾರ್ಥಿಗಳಲ್ಲಿ 23 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ಮತ್ತು ಇನ್ನುಳಿದ 7 ವಿದ್ಯಾರ್ಥಿಗಳು ಉತ್ತಮ ಫಲಿತಾಂಶದ ಮೂಲಕ ಒಟ್ಟು ಶೇ. 83.33ರಷ್ಟು ಫಲಿತಾಂಶ ಪಡೆದು ತೇರ್ಗಡೆಯಾಗಿದ್ದಾರೆ ಎಂದು ಕಾಲೇಜಿನ ಪ್ರಾಂಶುಪಾಲರಾದ ಬಸಯ್ಯ ಹಿರೇಮಠ ಸಂತಸ ವ್ಯಕ್ತಪಡಿಸಿ ವಿದ್ಯಾರ್ಥಿಗಳಿಗೆ ಅಭಿನಂದಿಸಿದರು.

ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳನ್ನು ಪಡೆದು ಶಿಕ್ಷಣ ಸಂಸ್ಥೆಯ ಗೌರವವನ್ನು ಹೆಚ್ಚಿಸಿದ್ದಾರೆ. ಆರ್‌ಎಮ್‌ಎಸ್‌ಎಸ್ ನರ್ಸಿಂಗ್ ಸೈನ್ಸ್ ಕಾಲೇಜಿನ ರೂವಾರಿ, ಸಚಿವ ಡಾ. ಹೆಚ್.ಕೆ. ಪಾಟೀಲ್, ಅಧ್ಯಕ್ಷರಾದ ಡಾ. ಎಸ್.ಆರ್. ನಾಗನೂರ, ಗೌರವ ಕಾರ್ಯದರ್ಶಿ ಡಾ. ವೇಮನ್ ಸಾವಕಾರ ಹರ್ಷ ವ್ಯಕ್ತಪಡಿಸಿದ್ದಾರೆ.

# ಮೈಕ್ರೋ ಫೈನಾನ್ಸ್ ಸುಗ್ರೀವಾಜ್ಞೆಗೆ ರಾಜ್ಯಪಾಲರಿಂದ ಅಂಕಿತ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ರಾಜ್ಯಪಾಲರು ಕೋರಿದ ವಿವರಣೆಯೊಂದಿಗೆ ಮೈಕ್ರೋ ಫೈನಾನ್ಸ್‌ಗೆ ಸಂಬಂಧಿಸಿದ ಸುಗ್ರೀವಾಜ್ಞೆಯನ್ನು ಸರ್ಕಾರ ರಾಜಭವನಕ್ಕೆ ಕಳುಹಿಸಿತ್ತು. ಅದಕ್ಕೆ ರಾಜ್ಯಪಾಲರು ಸಹಿ ಹಾಕಿದ್ದಾರೆ ಎಂದು ಮುಖ್ಯಮಂತ್ರಿ ಕಚೇರಿ ಬುಧವಾರ (ಫೆ.12) ತಿಳಿಸಿದೆ.

ಮೈಕ್ರೊ ಫೈನಾನ್ಸ್ ಕಂಪನಿಗಳು ಜನ ಸಾಮಾನ್ಯರ ಮೇಲೆ ನಡೆಸುತ್ತಿರುವ ದೌರ್ಜನ್ಯ ತಡೆಗಟ್ಟಲು ರಾಜ್ಯ ಸರ್ಕಾರ ಕಳುಹಿಸಿದ್ದ ಸುಗ್ರೀವಾಜ್ಞೆಯನ್ನು ರಾಜ್ಯಪಾಲ ಥಾವರ್ ಚಂದ್ ಗೆಹಲೋಟ್ ಅವರು ತಿರಸ್ಕರಿಸಿದ್ದಾರೆ ಎಂದು ಮುಖ್ಯಮಂತ್ರಿ ಕಚೇರಿ ಶುಕ್ರವಾರ (ಫೆ.7) ಹೇಳಿತ್ತು.

ಸುಗ್ರೀವಾಜ್ಞೆಯಲ್ಲಿ ಹೇಳಲಾಗಿರುವ 10 ವರ್ಷಗಳ ಶಿಕ್ಷೆ ಹಾಗೂ 5 ಲಕ್ಷ ದಂಡ ವಿಪರೀತವಾಗಿದೆ.

ಈಗ ಚಾಲ್ತಿಯಲ್ಲಿರುವ ಕಾನೂನನ್ನು ಉಪಯೋಗಿಸಿಕೊಂಡು ಪೊಲೀಸ್ ಇಲಾಖೆ ಪರಿಸ್ಥಿತಿಯನ್ನು ನಿಯಂತ್ರಿಸಬಹುದು.

ಸುಗ್ರೀವಾಜ್ಞೆಯು ಮೈಕ್ರೊ ಫೈನಾನ್ಸ್ ಕಂಪನಿಗಳ ಮೇಲೆ ಋಣಾತ್ಮಕ ಪರಿಣಾಮ ಬೀರಲಿದೆ. ಬಡವರಿಗೂ ತೊಂದರೆಯಾಗಲಿದೆ.

ಮೇಲಿನ ಮೂರು ಕಾರಣಗಳನ್ನು ಕೊಟ್ಟು ರಾಜ್ಯಪಾಲರು ಸುಗ್ರಿವಾಜ್ಞೆ ತಿರಸ್ಕರಿಸಿದ್ದಾರೆ ಎಂದು ಸಿಎಂ ಕಚೇರಿ ಮಾಹಿತಿ ನೀಡಿತ್ತು.

ನಂತರ ಮೈಕ್ರೋ ಫೈನಾನ್ಸ್ ಕುರಿತ ಸುಗ್ರೀವಾಜ್ಞೆಯನ್ನು ರಾಜ್ಯಪಾಲರು ಕೇಳಿದ ಸಮಗ್ರ ವಿವರಣೆಗಳೊಂದಿಗೆ ವಾಪಾಸ್ ರಾಜಭವನಕ್ಕೆ ರವಾನಿಸಲಾಗಿದೆ ಎಂದು ಸೋಮವಾರ (ಫೆ.10) ಸರ್ಕಾರ ತಿಳಿಸಿತ್ತು.

ಮೈಕ್ರೊ ಫೈನಾನ್ಸ್ ಕಿರುಕುಳಕ್ಕೆ ಕಡಿವಾಣ ಹಾಕಲು ಜನವರಿ 30ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಸುಗ್ರಿವಾಜ್ಞೆ ಮೂಲಕ ಹೊಸ ಕಾನೂನು ಜಾರಿಗೊಳಿಸಲು ಸರ್ಕಾರ ನಿರ್ಧರಿಸಿತ್ತು.

### ಎನ್‌ಎಸ್‌ಎಸ್ ಅಧಿಕಾರಿಗಳಿಗೆ ಹಮ್ಮಿಕೊಳ್ಳಲಾಗಿದ್ದ ರಾಜ್ಯಮಟ್ಟದ ತರಬೇತಿ ಕಾರ್ಯಕ್ರಮದಲ್ಲಿ ಡಿ.ಆರ್. ಪಾಟೀಲ್

# ಎಲ್ಲರೂ ನೈತಿಕ ಮೌಲ್ಯ ಬೆಳೆಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಪ್ರೌಢಶಾಲೆ, ಕಾಲೇಜುಗಳು ವ್ಯಕ್ತಿತ್ವ ರೂಪಿಸುವ ವೇದಿಕೆಗಳಾಗಿವೆ. ನಮಗೆ ದೊರೆತ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಣೆ ಮಾಡಬೇಕು. ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪ್ರತಿಯೊಬ್ಬರೂ ನೈತಿಕ ಮೌಲ್ಯ ಬೆಳೆಸಿಕೊಳ್ಳಬೇಕು ಎಂದು ಮಾಜಿ ವಿಧಾನಸಭಾ ಸದಸ್ಯರು ಮತ್ತು ಶ್ರೀ ಸಿದ್ಧಾರೂಢ ಸ್ವಾಮೀಜಿ ಟ್ರಸ್ಟ್ ಸಮಿತಿ (ಮೇಲ್ಮನೆ) ಅಧ್ಯಕ್ಷರಾದ ಡಿ.ಆರ್. ಪಾಟೀಲ್ ಹೇಳಿದರು.

ಮಂಗಳವಾರ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ರಾಜ್ಯ ಎನ್‌ಎಸ್‌ಎಸ್ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಷ್ಟ್ರೀಯ ಸೇವಾ ಯೋಜನಾ ಕೋಶ ಮತ್ತು ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಜಂಟಿಯಾಗಿ 5 ದಿನಗಳ ಎನ್‌ಎಸ್‌ಎಸ್ ಅಧಿಕಾರಿಗಳಿಗೆ ಹಮ್ಮಿಕೊಳ್ಳಲಾಗಿದ್ದ ರಾಜ್ಯಮಟ್ಟದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಿರಂತರವಾಗಿ ಮೌಲ್ಯಯುತ ಶಿಕ್ಷಣ ನೀಡುವುದು ಅವಶ್ಯವಾಗಿದೆ. ವ್ಯಕ್ತಿತ್ವ ರೂಪಿಸಲು ವಿಶೇಷ ಗಮನ ಹರಿಸಬೇಕಾಗಿದೆ. ಎನ್‌ಎಸ್‌ಎಸ್ ಗೀತೆಯು ಬದುಕಿನಲ್ಲಿ ಬದಲಾವಣೆಗಳನ್ನು ತರುತ್ತದೆ. ಗಾಂಧೀಜಿ, ಸ್ವಾಮಿ ವಿವೇಕಾನಂದರ ಹಲವಾರು ವಿಚಾರಗಳು ನಮಗೆ ದಾರಿದೀಪವಾಗಿವೆ. ಸ್ವಯಂ ಸೇವಕರು ಆಯ್ಕೆ ಮಾಡಿಕೊಂಡ ಗ್ರಾಮಗಳನ್ನು ಯಾವ ರೀತಿಯಲ್ಲಿ ಅಭಿವೃದ್ಧಿಪಡಿಸಬೇಕು ಎಂಬುದನ್ನು ಅವರ ವಿಚಾರಕ್ಕೆ ಬಿಟ್ಟು ಬಿಡಿ. ಕಾರ್ಯಕ್ರಮಗಳನ್ನು ಅನುಷ್ಠಾನ ತರುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಶಿಕ್ಷಕರು ಜವಾಬ್ದಾರಿಯ ಸ್ಥಾನದಲ್ಲಿದ್ದು, ವಿದ್ಯಾರ್ಥಿಗಳಲ್ಲಿ ಬದಲಾವಣೆ ತರಬೇಕಾಗಿದೆ ಎಂದರು.

ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ನಿರ್ದೇಶಕರಾದ ಪ್ರೊ. ವೆಂಕಪ್ಪಯ್ಯ ಆರ್.ದೇಸಾಯಿ ಮಾತನಾಡಿ, ಸುಮಾರು 50 ವರ್ಷಗಳ ಕಾಲ ಎನ್‌ಎಸ್‌ಎಸ್ ಜೊತೆ ಒಡನಾಟ ಹೊಂದಿದ್ದೇನೆ. ಐಐಟಿ ಕರಗಪುರದಲ್ಲಿ ಸಹ ಎನ್‌ಎಸ್‌ಎಸ್‌ನಲ್ಲಿ ಭಾಗಿಯಾಗಿದ್ದೆ. ಶಿಕ್ಷಕರು ಪ್ರೇರಣೆಯನ್ನು ನೀಡುವವರಾಗಬೇಕು. ಜೀವನವನ್ನು ಸಾರ್ಥಕ ಮಾಡಿಕೊಳ್ಳಲು ಪ್ರಯತ್ನಿಸಬೇಕಾಗಿದೆ. ಉತ್ತಮ ಜೀವನವನ್ನು ನಡೆಸಬೇಕು ಎಂದು ತಿಳಿಸಿದರು.

ಪ್ರೊ. ಜಿ.ಬಿ. ಶಿವರಾಜು, ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಸಿ. ಬಸವರಾಜು ಮಾತನಾಡಿದರು. ಕಾರ್ಯಕ್ರಮದಲ್ಲಿ ಗಾಂಧೀಜಿ ಕುರಿತಾದ ಪುಸ್ತಕಗಳನ್ನು ಬಿಡುಗಡೆಗೊಳಿಸಲಾಯಿತು.

ಸಿಂಡಿಕೇಟ್ ಸದಸ್ಯರಾದ ಎಸ್.ಎನ್. ಪರಾಂಡೆ, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕುಲಸಚಿವೆ ಅನುರಾಧ ವಸ್ತ್ರದ, ಮೌಲ್ಯಮಾಪನ ಕುಲಸಚಿವೆ ಡಾ.ರತ್ನಾ ಭರಮಗೌಡರ, ಕೆಎಸ್‌ಎಲ್‌ಯು ಕಾನೂನು ಶಾಲೆಯ ಸಹಾಯಕ ಪ್ರಾಧ್ಯಾಪಕರಾದ ಐ.ಬಿ. ಬಿರಾದಾರ್, ಪ್ರಶಾಂತ್ ಎಡ್ರಾಮಿಮಠ್ ಸೇರಿದಂತೆ ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಇತರರು ಉಪಸ್ಥಿತರಿದ್ದರು.

ಐಶ್ವರ್ಯ ಭಟ ನಿರೂಪಿಸಿದರು. ಸಿಂಚನಾ ಅತಿಥಿಗಳನ್ನು ಪರಿಚಯಿಸಿದರು. ಆದ್ವಿ ವಂದಿಸಿದರು.




> ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ರಾಜ್ಯ ಎನ್‌ಎಸ್‌ಎಸ್ ಕೋಶದ ರಾಜ್ಯ ಎನ್‌ಎಸ್‌ಎಸ್ ಅಧಿಕಾರಿ ಪ್ರತಾಪ್ ಲಿಂಗಯ್ಯ ಮಾತನಾಡಿ, ಮೌಲ್ಯಾಧಾರಿತ ಶಿಕ್ಷಣ ಒದಗಿಸಲು ಎನ್‌ಎಸ್‌ಎಸ್ ಸಹಕಾರಿಯಾಗಿದೆ. ಉತ್ತಮ ಜೀವನ ಶೈಲಿ ರೂಢಿಸಿಕೊಳ್ಳಬಹುದು. ಅಲ್ಲದೇ ತಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಲು ಎನ್‌ಎಸ್‌ಎಸ್ ನೆರವಾಗಲಿದೆ. ಪರೀಕ್ಷೆಗಳನ್ನು ಎದುರಿಸಲು ಸಹಾಯಕವಾಗಲಿದೆ. ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು. ಸದೃಢ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈ ಜೋಡಿಸೋಣ ಎಂದರು.

# ಪರಿಹಾರ ಕೋರಿ ಸಲ್ಲಿಸಿದ್ದ ಅರ್ಜಿ ತಿರಸ್ಕಾರ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಸಾರಿಗೆ ಸಂಸ್ಥೆಯಿಂದ ತನಗಾದ ಮಾನಸಿಕ ತೊಂದರೆಗೆ ಪರಿಹಾರ ಕೋರಿ ಪ್ರಯಾಣಿಕರೊಬ್ಬರು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಸಲ್ಲಿಸಿದ್ದ ಅರ್ಜಿಯನ್ನು ಆಯೋಗವು ತಳ್ಳಿಹಾಕಿದೆ.

ಎಚ್.ಬಿ. ತಳವಾರ ಎಂಬುವರು ಸಂಸ್ಥೆಯ ವಿದ್ಯಾರ್ಥಿ ಬಸ್‌ಪಾಸ್‌ನ್ನು ಬಾದಾಮಿಯಿಂದ ಕಟಗೇರಿ ಮಾರ್ಗವಾಗಿ ಪಡೆದಿದ್ದು, ನವನಗರದಿಂದ ಮುಚಖಂಡಿ ಮಾರ್ಗದಲ್ಲಿ ಕಾರ್ಯಾಚರಣೆಯಲ್ಲಿದ್ದ ತಡೆರಹಿತ ಸಾರಿಗೆಯಲ್ಲಿ ಪ್ರಯಾಣಿಸಲು ಅನುಮತಿಸದೇ ರೂ.45ರಂತೆ ಎರಡು ಬಾರಿ ಪ್ರಯಾಣಿಸಲಾಗಿ ಟಿಕೇಟ್ ದರ ರೂ. 90 ಪಡೆದಿದ್ದು, ಇದರಿಂದಾಗಿ ತನಗಾದ ಮಾನಸಿಕ ತೊಂದರೆಗೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಬಾಗಲಕೋಟೆ ಇವರಲ್ಲಿ ರೂ.2,00,000 ಪರಿಹಾರ ಕೋರಿ ಸಂಸ್ಥೆಯ ವಿರುದ್ಧ ಪ್ರಕರಣ ದಾಖಲಿಸಿದ್ದರು.

ನ್ಯಾಯಾಲಯವು ವಾದ-ಪ್ರತಿವಾದವನ್ನು ಆಲಿಸಿ, ಸಂಸ್ಥೆಯ ಜಾರಿ ನಿಯಮಾವಳಿಯನ್ವಯ ಪಾಸಿನಲ್ಲಿ ನಮೂದಿಸಿದ ನಿರ್ದಿಷ್ಟ ಮಾರ್ಗದಲ್ಲಿ ಮಾತ್ರ ಪ್ರಯಾಣಕ್ಕೆ ಅವಕಾಶವಿದ್ದು, ನಿರ್ದಿಷ್ಟ ಪಾಸ್ ಮಾರ್ಗ ಹಾಗೂ ಸೇವೆಯನ್ನು ಹೊರತುಪಡಿಸಿ ಇತರೆ ಮಾರ್ಗ ಹಾಗೂ ಸೇವೆಯಲ್ಲಿ ಪ್ರಯಾಣಕ್ಕೆ ಅವಕಾಶವಿಲ್ಲ. ಈ ಕುರಿತು ಸಂಸ್ಥೆಯಿಂದ ಕೈಗೊಂಡ ಕ್ರಮ ಸರಿಯಾಗಿದೆ ಎಂದು ನ್ಯಾಯ ತೀರ್ಪು ಜಾರಿ ಮಾಡಿದೆ.

ಆದೇಶದ ಅನುಸಾರ ವಿದ್ಯಾರ್ಥಿಗಳಿಗೆ ನೀಡಲಾದ ವಿದ್ಯಾರ್ಥಿ ಪಾಸ್‌ನಡಿಯಲ್ಲಿನ ಮಾರ್ಗ ಹಾಗೂ ಸೇವೆಯಲ್ಲಿ ಮಾತ್ರ ಪ್ರಯಾಣಿಸುವಂತೆ ಹಾಗೂ ಸಂಸ್ಥೆಯ ನೌಕರರಿಗೆ ಅನಗತ್ಯವಾಗಿ ತೊಂದರೆಯುಂಟುಮಾಡದೇ ಸಂಸ್ಥೆಯೊಂದಿಗೆ ಸಹಕರಿಸಲು ಕೋರಿದೆ.

### ಬಿಸಿಎನ್ ವಿದ್ಯಾಸಂಸ್ಥೆಯಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರಶ್ನೆಪತ್ರಿಕೆ ಬಿಡಿಸುವ ಕಾರ್ಯಾಗಾರ

# ಏಕಾಗ್ರತೆಯಿಂದ ಓದಿದರೆ ಉತ್ತಮ ಫಲಿತಾಂಶ ಸಾಧ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಿಸಿಎನ್ ವಿದ್ಯಾಸಂಸ್ಥೆಯಲ್ಲಿ ಗದಗ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಹಾಗೂ ಬಿಸಿಎನ್ ವಿಜನ್ ಪ.ಪೂ. ಮತ್ತು ಪದವಿ ಕಾಲೇಜುಗಳ ಸಹಯೋಗದಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಇಂಗ್ಲೀಷ್, ಕನ್ನಡ, ಲೆಕ್ಕಶಾಸ್ತ್ರ, ವ್ಯವಹಾರ ಅಧ್ಯಯನ ವಿಷಯಗಳ ಮೇಲಿನ ಪ್ರಶ್ನೆಪತ್ರಿಕೆಗಳನ್ನು ಬಿಡಿಸುವ ಎರಡು ದಿನಗಳ ಕಾರ್ಯಾಗಾರ ಬುಧವಾರ ಪ್ರಾರಂಭವಾಯಿತು.

ಅತಿಥಿಗಳಾಗಿ ಆಗಮಿಸಿದ್ದ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಪಿಯುಸಿ ವಿದ್ಯಾರ್ಥಿ ಜೀವನದ ಮಹತ್ವದ ಘಟ್ಟವಾಗಿದ್ದು, ಪರೀಕ್ಷಾ ಸಮಯ ಅತ್ಯಮೂಲ್ಯ. ವ್ಯರ್ಥ ಮಾಡಬೇಡಿ. ಪಿಯುಸಿ ಪದವಿ ಹಂತದ ಶಿಕ್ಷಣಕ್ಕೆ ಮೆಟ್ಟಿಲಾಗಿದ್ದು, ವೇಳಾಪಟ್ಟಿ ಸಿದ್ಧಪಡಿಸಿಕೊಂಡು ದೃಢ ನಿರ್ಧಾರ, ಏಕಾಗ್ರತೆಯಿಂದ ಓದಿದರೆ ಖಂಡಿತ ಉತ್ತಮ ಫಲಿತಾಂಶ ಸಾಧ್ಯ. ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಸ್ಪರ್ಧೆಯಿದ್ದು, ಶ್ರೇಷ್ಠವಾದ ಫಲಿತಾಂಶ ನಿಮ್ಮದಾಗಬೇಕು. ಕಳೆದ 3 ದಶಕಗಳಿಂದ ಶಿಕ್ಷಣ ಸೇವೆ ಮಾಡುತ್ತಿರುವ ಬಿಸಿಎನ್ ವಿದ್ಯಾ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದ ಅವರು, ಪರೀಕ್ಷೆ ನಂತರ ನೀಟ್ ಕೋಚಿಂಗ್‌ಗೆ ಉಚಿತ ಅವಕಾಶ ಕಲ್ಪಿಸಲಾಗುವುದು ಎಂದರು.

ದ್ವಿತೀಯ ಪಿಯುಸಿ ವಿದ್ಯಾರ್ಥಿ ಜೀವನದ ಅತಿ ಮುಖ್ಯ ಹಂತವಾಗಿದ್ದು, ಮುಂಬರುವ ಪರೀಕ್ಷೆಗೆ ಉತ್ತಮ ತಯಾರಿ ನಡೆಸಿ ಒಳ್ಳೆಯ ಫಲಿತಾಂಶ ಪಡೆದುಕೊಳ್ಳಿ. ಜೀವನವನ್ನು ಸುಲಭವಾಗಿ ತೆಗೆದುಕೊಳ್ಳುವದು ಬೇಡ. ಇರುವ ಕಡಿಮೆ ಅವಧಿಯಲ್ಲಿ ಉತ್ತಮ ಸಾಧನೆ ಮಾಡುವ ಗುರಿಯನ್ನು ಮುಟ್ಟಿ ಎಂದು ಸಲಹೆ ನೀಡಿದರು. ಕಾರ್ಯಕ್ರಮವನ್ನು ಬಿಸಿಎನ್ ಸಂಸ್ಥೆಯ ಕಾರ್ಯದರ್ಶಿ ಲೋಹಿತ್ ನೆಲವಿಗಿ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳಿಗೆ ಕಷ್ಟ ಎನಿಸುವ ಇಂಗ್ಲಿಷ್ ವಿಷಯವನ್ನು ಪರೀಕ್ಷಾ ದೃಷ್ಟಿಯಿಂದ ಸುಲಭಗೊಳಿಸುವ ಈ ಕಾರ್ಯಾಗಾರಗಳ ಸದುಪಯೋಗ ಆಗಬೇಕು. ವಾರ್ಷಿಕ ಪರೀಕ್ಷೆಗೆ ತಯಾರಾಗಲು ಈ ಕಾರ್ಯಾಗಾರಗಳು ವಿದ್ಯಾರ್ಥಿಗಳಿಗೆ ಅನುಕೂಲಕರವಾಗಲಿವೆ. ವಿದ್ಯಾರ್ಥಿಗಳ ಅಭ್ಯಾಸದಲ್ಲಿ ಪ್ರಗತಿ ಸಾಧಿಸಬೇಕೆನ್ನುವ ಉದ್ದೇಶದಿಂದ ಸಂಸ್ಥೆಯ ವತಿಯಿಂದ ಕಾರ್ಯಾಗಾರ ಸೇರಿದಂತೆ ಅನೇಕ ಯೋಜನೆಗಳನ್ನು ಹಾಕಿಕೊಂಡು ಯಶಸ್ವಿಯಾಗಿ ಮಾಡಿದ್ದೇವೆ. ಇಂತವುಗಳ ಪ್ರಯೋಜನ ಪಡೆದ ವಿದ್ಯಾರ್ಥಿಗಳು ಉತ್ತಮ ಅಂಕಗಳಿಸಿ ಸಾಧನೆ ಮಾಡಿದರೆ ನಾವು ಮಾಡಿದ ಕಾರ್ಯಗಳು ಸಾರ್ಥಕತೆ ಪಡೆದುಕೊಳ್ಳುತ್ತವೆ ಎಂದು ಹೇಳಿದರು.



ಇಂಗ್ಲೀಷ್ ವಿಷಯದ ಸಂಪನ್ಮೂಲ ವ್ಯಕ್ತಿಗಳಾಗಿ ಶಿರಹಟ್ಟಿ ಸರಕಾರಿ ಪ.ಪೂ ಕಾಲೇಜು ಪ್ರಾಚಾರ್ಯ ಬಸವರಾಜ ಗಿರಿತಿಮ್ಮನ್ನವರ್, ಗದಗ ಕೆವಿಎಸ್‌ಆರ್ ಪಿಯು ಕಾಲೇಜು ಉಪನ್ಯಾಸಕ ರಮಾಕಾಂತ ದೊಡ್ಡಮನಿ, ಕನ್ನಡ ವಿಷಯದ ಸಂಪನ್ಮೂಲ ವ್ಯಕ್ತಿಗಳಾಗಿ ತಿಮ್ಮಾಪೂರ ಕೆವಿಎಸ್‌ಆರ್ ಉಪನ್ಯಾಸಕ ಶಾಂತಕುಮಾರ ಮಲ್ಲಾಪುರ, ಬಿಸಿಎನ್ ವಿಜನ್ ಪಿಯು ಕಾಲೇಜು ಪ್ರಾಚಾರ್ಯ ಮಂಜುನಾಥ ಭಂಡಿವಾಡ, ಶಿಗ್ಲಿ ಸರಕಾರಿ ಪ.ಪೂ ಕಾಲೇಜು ಉಪನ್ಯಾಸಕ ತಮ್ಮನಗೌಡ ಪಾಟೀಲ ಬದಲಾದ ಹೊಸ ಪರೀಕ್ಷಾ ಪದ್ಧತಿ ಹಾಗೂ ಪ್ರಶ್ನೆಪತ್ರಿಕೆ ಮಾದರಿಯ ಪ್ರಕಾರ ವಿದ್ಯಾರ್ಥಿಗಳಿಗೆ ಇಂಗ್ಲಿಷ್ ವಿಷಯದಲ್ಲಿ ಉತ್ತಮ ಅಂಕ ಪಡೆಯುವ ಬಗ್ಗೆ ಮಾರ್ಗದರ್ಶನ ಮಾಡಿದರು.

ಕಾರ್ಯಕ್ರಮದಲ್ಲಿ ಪ್ರಾಚಾರ್ಯರುಗಳಾದ ಜಾನಾ ನಾಯಕ್, ಎ.ವಾಯ್. ಕಳ್ಳಿಮನಿ, ಉಪನ್ಯಾಸಕರಾದ ರಮೇಶ ಗಿಣಿ, ರಾಜಶೇಖರ, ಬಸವರಾಜ ಶೆಟ್ಟರ, ವೆಂಕಟೇಶ ಪೂಜಾರ, ಗಿರೀಶ ರೆಡ್ಡಿ, ಸೇರಿದಂತೆ ವಿವಿಧ ಕಾಲೇಜುಗಳ ಪ್ರಾಚಾರ್ಯರು, ವಿಷಯಗಳ ಉಪನ್ಯಾಸಕರು ಹಾಜರಿದ್ದರು.

# ಶರಣ ಸಾಹಿತ್ಯದಿಂದ ಸದೃಢ ಸಮಾಜ

■ ವಿಜಯಸಾಕ್ಷಿ ಸುದ್ದಿ, ರೋಣ

ಶರಣ ಸಾಹಿತ್ಯದಿಂದ ಸಮಾಜ ಸದೃಢವಾಗುವುದರಲ್ಲಿ ಸಂದೇಹವಿಲ್ಲ ಎಂದು ಕದಳಿ ಮಹಿಳಾ ವೇದಿಕೆಯ ಜಿಲ್ಲಾಧ್ಯಕ್ಷರಾದ ಸುಧಾ ಹುಚ್ಚಣ್ಣವರ ಹೇಳಿದರು. ಅವರು ಇತ್ತೀಚೆಗೆ ಪಟ್ಟಣದ ಸಾಹಿತ್ಯ ಭವನದಲ್ಲಿ ಜರುಗಿದ ಶರಣ ಸಾಹಿತ್ಯ ಪರಿಷತ್ ಹಾಗೂ ಕದಳಿ ಮಹಿಳಾ ವೇದಿಕೆಯ ನೂತನ ಪದಾಧಿಕಾರಿಗಳ ಸೇವಾದೀಕ್ಷೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಮಹಿಳೆಯರೂ ಸಹ ಸಾಹಿತ್ಯದ ಕಡೆಗೆ ಹೆಚ್ಚಿನ ಒಲುವು ಹೊಂದಬೇಕು. ಶರಣ ಸಾಹಿತ್ಯದ ಬಗ್ಗೆ ತಿಳಿದುಕೊಳ್ಳುವ ಪ್ರಯತ್ನ ಮಾಡಬೇಕು. ಶರಣ ಚಿಂತನೆಯಿಂದ ಸಮಾಜದ ಜೊತೆಗೆ ಕುಟುಂಬಗಳು ಸಹ ಸದೃಢವಾಗಲಿವೆ. ಶರಣ ಸಾಹಿತ್ಯವನ್ನು ಮತ್ತಷ್ಟು ಬೆಳೆಸಬೇಕು, ಇತಿಹಾಸವನ್ನು ಅರಿಯಬೇಕು. ಈ ಕಾರ್ಯಕ್ಕೆ ಮಹಿಳೆಯರು ಮುಂದೆ ಬರಬೇಕು ಎಂದರು.



ಪುರಸಭಾ ಸದಸ್ಯ ಸಂಗನಗೌಡ ಪಾಟೀಲ ಕಾರ್ಯಕ್ರಮ ಉದ್ಘಾಟಿಸಿದರು. ಗುರುಪಾದ ದೇವರು ಸಾನ್ನಿಧ್ಯವನ್ನು, ಕೆ.ಎ. ಬಳಿಗೇರ ಅಧ್ಯಕ್ಷತೆ ವಹಿಸಿದ್ದರು. ಪುರಸಭಾ ಅಧ್ಯಕ್ಷೆ ಗೀತಾ ಮಾಡಲಗೇರಿ, ಕದಳಿ ವೇದಿಕೆಯ ತಾಲೂಕಾಧ್ಯಕ್ಷೆ ಶಶಿಕಲಾ ಪಾಟೀಲ, ವಿ.ಕೆ. ಪಾಟೀಲ, ಲಕ್ಷ್ಮೀ ಕೆಂಚರೆಡ್ಡಿ, ಲಕ್ಷ್ಮೀ ಗಡಗಿ, ಅನ್ನಪೂರ್ಣಾ ಹೂಗಾರ, ಛಾಯಾ ಅಚ್ಚನಗೌಡ್ರ, ವೀಣಾ ಹಾಲಣ್ಣವರ, ಪಂಚಯ್ಯ ಹಿರೇಮಠ, ವೀರುಪಾಕ್ಷಗವಡ ದೇಸಾಯಿಗೌಡ್ರ, ಮಹಾದೇವಗೌಡ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಲ್ಲಿ ಶಿಸ್ತು, ಕಠಿಣ ಪರಿಶ್ರಮ ಅವಶ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರತಿಯೊಬ್ಬ ವಿದ್ಯಾರ್ಥಿಯೂ ಉನ್ನತ ಗುರಿಯನ್ನು ಸಾಧಿಸುವ ಉದ್ದೇಶ ಇಟ್ಟುಕೊಂಡಿರಬೇಕು. ಅಂದರೆ ಮಾತ್ರ ಸಾಧನೆ ಮಾಡಲು ಸಾಧ್ಯವಾಗುತ್ತದೆ. ವಿದ್ಯಾರ್ಥಿ ಜೀವನ ಎನ್ನುವ ಮಹತ್ವದ ಘಟ್ಟದಲ್ಲಿ ಉನ್ನತ ಗುರಿಯ ಸಾಧನೆ ಹೊತ್ತು ಸಾಗುವ ವಿದ್ಯಾರ್ಥಿಗಳಲ್ಲಿ ಶಿಸ್ತು, ಕಠಿಣ ಪರಿಶ್ರಮ ಅವಶ್ಯವಾಗಿದೆ ಎಂದು ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಮತ್ತು ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಎನ್.ಎನ್. ನೆಗಳೂರ ಹೇಳಿದರು.

ಅವರು ಸಮೀಪದ ಶಿಗ್ಲಿ ಗ್ರಾಮದ ಶ್ರೀ ಪರಮೇಶ್ವರಪ್ಪ ಮಲ್ಲೇಶಪ್ಪ ಬಳಿಗಾರ ಸರಕಾರಿ ಸ್ವತಂತ್ರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಪದವಿಪೂರ್ವ ಕಾಲೇಜಿನಲ್ಲಿ ಸಾಂಸ್ಕೃತಿ, ಕ್ರೀಡಾ ಚಟುವಟಿಕೆಗಳ ಸಮಾರೋಪ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಿ.ಪಿ. ಹೇಮಾದ್ರಿ ಪ್ರಾಸ್ತಾವಿಕವಾಗಿ ಮಾತನಾಡಿ, ಸರಕಾರಿ ಕಾಲೇಜುಗಳಲ್ಲಿ ಎಲ್ಲ ಸೌಲಭ್ಯಗಳ ಜೊತೆ ಅರ್ಹ ಉಪನ್ಯಾಸಕರ ಉತ್ತಮ ಬೋಧನೆ ದೊರೆಯುತ್ತಿದೆ. ವಿದ್ಯಾರ್ಥಿಗಳು ಎಲ್ಲ ಸೌಲಭ್ಯಗಳನ್ನು ಪಡೆದುಕೊಂಡು ಉತ್ತಮ ಅಂಕಗಳನ್ನು ಗಳಿಸುವ ನಿಟ್ಟಿನಲ್ಲಿ ಸಾಗಿ ಎಂದು ಹೇಳಿದರು.

ಅತಿಥಿಗಳಾಗಿ ಮಂಜುನಾಥ ದೇಸಾಯಿ, ನಟರಾಜ ಪವಾಡದ, ಕೇಶವ ಗುಲಗಂಜಿ, ಶಿವಾನಂದ ಮುದಗಲ್, ಮಹಾಂತೇಶ ತಳವಾರ ಮುಂತಾದವರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಆಂಗ್ಲ ಬಾಷಾ ಉಪನ್ಯಾಸಕ ಅಶೋಕ ಪೂಜಾರ, ದಾನಿಗಳಾದ ಈರಪ್ಪ ಪುನಗಿನ, ಓಲಂಪಿಕ್ ಯೋಗಾಸನ ಸ್ಪರ್ಧೆಯಲ್ಲಿ ರಾಷ್ಟ್ರಮಟ್ಟದಲ್ಲಿ ತೃತೀಯ ಸ್ಥಾನ ಪಡೆದ ಅನನ್ಯ ಹಿರೇಮಠ ಹಾಗೂ ಪ್ರಾಚಾರ್ಯ ಡಿ.ಪಿ. ಹೇಮಾದ್ರಿ ಅವರನ್ನು ಸನ್ಮಾನಿಸಲಾಯಿತು.

ವಿದ್ಯಾರ್ಥಿ ವಿನೋದಾ ಅಂಗಡಿ ಸ್ವಾಗತಿಸಿದರು, ಶಿವಾನಂದ ಮುದಿಗೌಡ್ರ ವರದಿವಾಚನ ಮಾಡಿದರು. ಟಿ.ಎಫ್. ಪಾಟೀಲ, ಪ್ರವೀಣ ಮಹೇಂದ್ರಕರ ನಿರೂಪಿಸಿದರು.

# ಶ್ರೀ ಬನಶಂಕರಿ ದೇವಿಯ ರಥೋತ್ಸವ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಕೆಂಚಲಾಪುರ ಓಣಿ, ಬನಶಂಕರಿ ಬಡಾವಣೆಯ ಶ್ರೀ ಬನಶಂಕರಿ ದೇವಸ್ಥಾನದ ರಥೋತ್ಸವ ಬುಧವಾರ ಸಂಜೆ ಶ್ರದ್ಧಾ ಭಕ್ತಿಯಿಂದ ನೆರವೇರಿತು. ಭಕ್ತರು ಉದ್ಘೋಷಗಳೊಂದಿಗೆ ರಥಕ್ಕೆ ಉತ್ತತ್ತಿ ಬಾಳೆಹಣ್ಣು ಎಸೆದು ಭಕ್ತಿ ಸಮರ್ಪಿಸಿದರು.

ಜಾತ್ರಾ ಮಹೋತ್ಸವ ನಿಮಿತ್ತ ಬುಧವಾರ ಬೆಳಿಗ್ಗೆಯಿಂದಲೇ ದೇವಸ್ಥಾನದಲ್ಲಿ ದೇವಿಗೆ ಅಭಿಷೇಕ, ಅಲಂಕಾರ ಪೂಜಾ, ಹೋಮ-ಹವನ ಇತ್ಯಾದಿ ಪೂಜಾ ಕೈಂಕರ್ಯಗಳು, ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಸತ್ಯನಾರಾಯಣ ಪೂಜಾ, ಪಲ್ಲಕ್ಕಿ ಉತ್ಸವಗಳು ನೆರವೇರಿದವು. ಬನಶಂಕರಿ ದೇವಿ ಸೇವಾ ಸಮಿತಿ ಅಧ್ಯಕ್ಷ ನಾಗರಾಜ ಗುಜರಿ, ಮಹಾಬಲೇಶ್ವರಪ್ಪ ಬೇವಿನಮರದ, ಮಹಾದೇವಪ್ಪ ಪಾತಾಳಿ, ನಾರಾಯಣಪ್ಪ ಗಾರಗಿ, ಮುರಳಿಧರ ಹುಬ್ಬಳ್ಳಿ, ಲಕ್ಷ್ಮಣ ಮೆಡ್ಲೇರಿ, ಚಿದಾನಂದ ಬೇವಿನಮರದ, ಶ್ರೀಕಾಂತ ಬೇವಿನಮರದ, ಶಂಕ್ರಪ್ಪ ಮುದಗಲ್ಲ, ಈಶ್ವರ ಮೆಡ್ಲೇರಿ, ಮಂಜುನಾಥ ಮಾಗಡಿ, ಹೊನ್ನಪ್ಪ ವಡ್ಡರ, ಸಿ.ಆರ್. ಲಕ್ಕುಂಡಿಮಠ, ಈಶ್ವರ ಯಳವತ್ತಿ, ಚನ್ನಬಸಗೌಡ ಉದ್ದನಗೌಡ್ರ, ಅಶೋಕ ಗುಳೇರ, ಅಶೋಕ ಬೇವಿನಮರದ, ಪರಶುರಾಮ ಹಣಗಿ, ಪ್ರವೀಣ ಬೇವಿನಮರದ, ಬಸವರಾಜ ನಾಗಲೋಟಿ ಸೇರಿ ಭಕ್ತರು, ಬನಶಂಕರಿ ದೇವಿ ಸೇವಾ ಸಮಿತಿ ಸದಸ್ಯರು ಇದ್ದರು.




# ಶ್ರೀ ಹೊಳಲಮ್ಮದೇವಿ ಮಹಾರಥೋತ್ಸವ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಶಕ್ತಿದೇವತೆ ಶ್ರೀಮಂತಗಡದ ಶ್ರೀ ಹೊಳಲಮ್ಮದೇವಿಯ ಜಾತ್ರಾ ಮಹೋತ್ಸವವು ಪ್ರತಿ ವರ್ಷದಂತೆ ಭಾರತ ಹುಣ್ಣಿಮೆಯ ದಿನವಾದ ಫೆ.12ರ ಸಂಜೆ 5 ಗಂಟೆಗೆ ಅಪಾರ ಭಕ್ತರ ಜಯಘೋಷದೊಂದಿಗೆ ಜರುಗಿತು.

ಇದಕ್ಕೂ ಮೊದಲು ಸಂಪ್ರದಾಯದಂತೆ ಬೆಳಿಗ್ಗೆ ಶ್ರೀ ಹೊಳಲಮ್ಮ ದೇವಿಗೆ ವಿಶೇಷ ಪೂಜೆಗಳು ನಡೆದವು. ತಾಲೂಕು ಸೇರಿದಂತೆ ವಿವಿಧೆಡೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡಿದ್ದರು.




ರಥಕ್ಕೆ ಉತ್ತತ್ತಿ, ಬಾಳೆಹಣ್ಣನ್ನು ಸಮರ್ಪಿಸಿ ದೇವಿಯ ಕೃಪೆಗೆ ಪಾತ್ರರಾದರು.

## ರೋಹಿಂಗ್ಯಾ ಮಕ್ಕಳ ಶಿಕ್ಷಣದಲ್ಲಿ ತಾರತಮ್ಯ ಇರಬಾರದು – ಸುಪ್ರೀಂಕೋರ್ಟ್

■ ವಿಜಯಸಾಕ್ಷಿ ಸುದ್ದಿ, ನವ ದೆಹಲಿ

ರೋಹಿಂಗ್ಯಾ ವಲಸಿಗರ ಮಕ್ಕಳಿಗೆ ಶಿಕ್ಷಣ ನೀಡುವಲ್ಲಿ ಯಾವುದೇ ತಾರತಮ್ಯ ಮಾಡಬಾರದು ಎಂದು ಸುಪ್ರೀಂ ಕೋರ್ಟ್ ಬುಧವಾರ ಅಭಿಪ್ರಾಯಪಟ್ಟಿದೆ ಎಂದು ಬಾರ್ ಮತ್ತು ಬೆಂಚ್ ವರದಿ ಮಾಡಿದೆ. ಸರ್ಕಾರೇತರ ಸಂಸ್ಥೆಯಾದ ರೋಹಿಂಗ್ಯಾ ಹ್ಯೂಮನ್ ರೈಟ್ಸ್ ಇನಿಶಿಯೇಟಿವ್ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆಗೆ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಎನ್‌ಕೆ ಸಿಂಗ್ ಅವರ ಪೀಠ ಈ ರೀತಿ ಪ್ರತಿಕ್ರಿಯಿಸಿದೆ.

ರೋಹಿಂಗ್ಯಾ ಮಕ್ಕಳ ರೋಹಿಂಗ್ಯಾ ನಿರಾಶ್ರಿತರ ಕುಟುಂಬಗಳಿಗೆ ಅವರ ಪೌರತ್ವ ಸ್ಥಾನಮಾನವನ್ನು ಗಣನೆಗೆ ತೆಗೆದುಕೊಳ್ಳದೆ, ಆಧಾರ್ ಸಂಖ್ಯೆಗಳನ್ನು ಹೊಂದಿರಬೇಕೆಂದು ಒತ್ತಾಯಿಸದೆ, ಸರ್ಕಾರಿ ಸೌಲಭ್ಯಗಳು ಮತ್ತು ಶಾಲಾ ಪ್ರವೇಶವನ್ನು ನೀಡಬೇಕು ಎಂದು ಸಂಘಟನೆ ಅರ್ಜಿಯಲ್ಲಿ ಕೋರಿದೆ ಎಂದು ಲೈವ್ ಲಾ ವರದಿ ಮಾಡಿದೆ.

# ನದಿಗೆ ಬಿದ್ದು ಇಬ್ಬರ ಸಾವು

■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಹೊಳೆಆಲೂರ ಮಲಪ್ರಭಾ ತಟದಲ್ಲಿ ಗಂಗಾ ಪೂಜೆ ಸಲ್ಲಿಸುವ ಸಂದರ್ಭದಲ್ಲಿ ಆಯ ತಪ್ಪಿ ಬಿದ್ದು ಇಬ್ಬರು ಸಾವನ್ನಪ್ಪಿದ ಘಟನೆ ಮಂಗಳವಾರ ಸಂಜೆ 4ರ ಸುಮಾರಿಗೆ ನಡೆದಿದೆ.

ಮಂಗಳವಾರ ಸಂಜೆ 4ರ ಸುಮಾರಿಗೆ ಹೊಳೆಆಲೂರ ಗ್ರಾಮದ ಮಲಪ್ರಭಾ ನದಿ ತಟದಲ್ಲಿ ಗಂಗಾ ಪೂಜೆ ಸಲ್ಲಿಸುವ ಸಂದರ್ಭದಲ್ಲಿ ಗದಗ ನಿವಾಸಿ ಗಂಗಪ್ಪ ರಾಮಪ್ಪ (37) ಹಾಗೂ ಕೊಪ್ಪಳ ಜಿಲ್ಲೆಯ ನಿವಾಸಿ ನಾಗರಾಜ ದುರ್ಗಪ್ಪ ಮಾಳಗಿಮನಿ (30) ಎಂಬುವರು ಆಯ ತಪ್ಪಿ ನದಿಗೆ ಬಿದ್ದಿದ್ದು, ರಕ್ಷಣಾ ಕಾರ್ಯ ನಡೆದರೂ ಫಲಕಾರಿಯಾಗಲಿಲ್ಲ. ಇವರಿಬ್ಬರ ಮೃತ ದೇಹಗಳು ಅದೇ ಸ್ಥಳದಿಂದ 20 ಅಡಿ ದೂರದಲ್ಲಿ ಬುಧವಾರ ಮದ್ಯಾಹ್ನ ಪತ್ತೆಯಾಗಿವೆ. ಘಟನೆಗೆ ಸಂಬಂಧಿಸಿ ರೋಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ನಡೆಸಿದ ಬಿ.ಎಸ್ಸಿ ನರ್ಸಿಂಗ್ ಪರೀಕ್ಷೆ

# ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಡಿಸೆಂಬರ್ 2024ರಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ನಡೆಸಿದ ಬಿ.ಎಸ್ಸಿ ನರ್ಸಿಂಗ್ ಪರೀಕ್ಷೆಗಳಲ್ಲಿ ಜಿಮ್ಸ್-ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಅತ್ಯುತ್ತಮ ಫಲಿತಾಂಶ ಪಡೆಯುವ ಮೂಲಕ ಸಂಸ್ಥೆಗೆ ಕೀರ್ತಿ ತಂದಿದ್ದಾರೆ.

ಬಿ.ಎಸ್ಸಿ ನರ್ಸಿಂಗ್ 4ನೇ ವರ್ಷದಲ್ಲಿ 88 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಎಲ್ಲಾ 88 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶೇ.100 ಫಲಿತಾಂಶ ಪಡೆದಿದ್ದಾರೆ. ಒಟ್ಟು 74 ಡಿಸ್ಟಿಂಕ್ಷನ್ ಹಾಗೂ 14 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದು, ಶಶಿಕಲಾ ಬಿ.ಬಿ ಪ್ರಥಮ (ಶೇ.85.6), ಭೀಮವ್ವ ಜಕ್ಕಲಿ ದ್ವಿತೀಯ (ಶೇ.84.6) ಮತ್ತು ಚೈತ್ರಾ ಬಿ. ತೃತೀಯ ಸ್ಥಾನ (ಶೇ.83.6) ಪಡೆದಿದ್ದಾರೆ.



ಬಿ.ಎಸ್ಸಿ ನರ್ಸಿಂಗ್ 3ನೇ ವರ್ಷದಲ್ಲಿ 85 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಎಲ್ಲಾ 85 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶೇ.100 ಫಲಿತಾಂಶ ಪಡೆದಿರುತ್ತಾರೆ. ಒಟ್ಟು 80 ಡಿಸ್ಟಿಂಕ್ಷನ್ ಹಾಗೂ 5 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ರಶ್ಮಿ ರಮೇಶ ನರಸಣ್ಣವರ ಪ್ರಥಮ (ಶೇ.84.14), ದೀಪಾ ಸೋಮಪ್ಪ ಪಿಸಿ ದ್ವಿತೀಯ (ಶೇ.83.4) ಮತ್ತು ನೇತ್ರಾವತಿ ಸಿ.ಹೆಚ್ ತೃತೀಯ ಸ್ಥಾನ (ಶೇ.82.57) ಪಡೆದಿರುತ್ತಾರೆ.

ಬಿ.ಎಸ್ಸಿ ನರ್ಸಿಂಗ್ 4ನೇ ಸೆಮಿಸ್ಟರ್‌ನಲ್ಲಿ 96 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಎಲ್ಲಾ 96 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶೇ.100 ಫಲಿತಾಂಶ ಪಡೆದಿರುತ್ತಾರೆ. ಒಟ್ಟು 26 ಡಿಸ್ಟಿಂಕ್ಷನ್, 63 ಪ್ರಥಮದರ್ಜೆ ಹಾಗೂ 7 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಜ್ಯೋತಿ ಮೇಟಿ (ಶೇ.81) ಪ್ರಥಮ, ಪವಿತ್ರಾ ಗೊರವರ (ಶೇ.80.33) ದ್ವಿತೀಯ ಹಾಗೂ ಸ್ನೇಹಾ ಎ.ಎಸ್ ತೃತೀಯ ಸ್ಥಾನ (ಶೇ.79) ಪಡೆದಿರುತ್ತಾರೆ.

ಬಿ.ಎಸ್ಸಿ ನರ್ಸಿಂಗ್ 2ನೇ ಸೆಮಿಸ್ಟರ್‌ನಲ್ಲಿ 96 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 92 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶೇ.95.83 ಫಲಿತಾಂಶ ಪಡೆದಿರುತ್ತಾರೆ. ಒಟ್ಟು 39 ಡಿಸ್ಟಿಂಕ್ಷನ್ ಹಾಗೂ 53 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಲಕ್ಷ್ಮೀ ತುದಿಗಾಲ (ಶೇ.81.6) ಹಾಗೂ ಪವಿತ್ರಾ ಬಮ್ಮಕ್ಕನವರ (ಶೇ.81.6) ಪ್ರಥಮ ಸ್ಥಾನ ಹಂಚಿಕೊಂಡಿದ್ದು, ಲಕ್ಷ್ಮೀ ಗೌಡರ (ಶೇ.81.33) ದ್ವಿತೀಯ ಸ್ಥಾನ ಮತ್ತು ಪೂರ್ಣಿಮಾ ಮ್ಯಾಗೇರಿ (ಶೇ.81) ತೃತೀಯ ಸ್ಥಾನ (ಶೇ.78) ಪಡೆದಿರುತ್ತಾರೆ.

ಉತ್ತಮ ಫಲಿತಾಂಶ ಪಡೆದಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರು, ಪ್ರಾಂಶುಪಾಲರು, ಜಿಮ್ಸ್ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದ ಪ್ರಾಂಶುಪಾಲರು ಹಾಗೂ ಬೋಧಕ, ಬೋಧಕೇತರ ಸಿಬ್ಬಂದಿಗಳು ಶುಭ ಹಾರೈಸಿದ್ದಾರೆ.

## ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಸ್ನಾತಕ, ಸ್ನಾತಕೋತ್ತರ ಕೋರ್ಸ್‌ಗಳಿಗೆ ಪ್ರವೇಶ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಪ್ರಸಕ್ತ 2024-25ನೇ ಜನವರಿ ಆವೃತ್ತಿಯ ಶೈಕ್ಷಣಿಕ ಸಾಲಿಗೆ ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸ್ ಗಳಾದ ಬಿ.ಎ, ಬಿ.ಕಾಂ, ಬಿ.ಲಿಬ್, ಬಿ.ಬಿ.ಎ, ಬಿ.ಸಿ.ಎ, ಬಿ.ಎಸ್ಸಿ, ಬಿ.ಎಸ್.ಡಬ್ಲ್ಯೂ, ಎಂ.ಎ, ಎಂ.ಎ-ಪತ್ರಿಕೋದ್ಯಮ. ಎಂ.ಕಾಂ, ಎಂ.ಬಿ.ಎ, ಎಂ.ಲಿಬ್, ಎಂ.ಎಸ್ಸಿ, ಎಂ.ಸಿ.ಎ, ಎಂ.ಎಸ್.ಡಬ್ಲ್ಯೂ ಹಾಗೂ ಡಿಪ್ಲೋಮಾ ಮತ್ತು ಪಿ.ಜಿ- ಸರ್ಟಿಫಿಕೇಟ್ ಕೋರ್ಸ್ ಗಳಿಗೆ ಪ್ರಸಕ್ತ ಶೈಕ್ಷಣಿಕ ಸಾಲಿನ ಪ್ರವೇಶಾತಿ ಆರಂಭವಾಗಿದೆ.

ವಿದ್ಯಾರ್ಥಿಗಳು ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಅಧಿಕೃತ ವೆಬ್‌ಸೈಟ್ www.ksoumysuru.ac.in KSOU AdmissionPortal ಮೂಲಕ ಪ್ರವೇಶಾತಿಯ ಅರ್ಜಿಯನ್ನು ಭರ್ತಿ ಮಾಡಿಸಿಕೊಂಡ ನಂತರ ಆನ್‌ಲೈನ್ ಮುಖಾಂತರ ಪ್ರವೇಶಾತಿಯ ಶುಲ್ಕ ಪಾವತಿಸಿ ಪ್ರವೇಶಾತಿಯನ್ನು ಪಡೆಯಲು ಗದಗ ಪ್ರಾದೇಶಿಕ ನಿರ್ದೇಶಕ ಸಿದ್ಧಾರ್ಥ್ ಬಿ.ಎನ್ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಗದಗ ಪ್ರಾದೇಶಿಕ ಕೇಂದ್ರ, ಎಲ್.ಎಲ್. ಕಟ್ಟಡ, ಡಾ॥ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ ಹತ್ತಿರ, ಜನರಲ್ ಕೆ.ಎಂ.ಕಾರ್ಯಪ್ಪ ವೃತ್ತ (ಹಳೆಯ ಡಿ.ಸಿ ಕಚೇರಿ ವೃತ್ತ), ಗದಗ-582101 ಹಾಗೂ ಕಚೇರಿ ದೂರವಾಣಿ ಸಂಖ್ಯೆ: 8884231002/8970555801/8549856177/9008459778/7259962717/7338103445 ಸಂಪರ್ಕಿಸಬಹುದಾಗಿದೆ.

ಹಾಲಕೆರೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಜಿ.ಎಸ್. ಪಾಟೀಲ

# ರೈತರು ತಮ್ಮ ಹಕ್ಕುಗಳಿಗೆ ದನಿಯೆತ್ತಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಂಘಗಳನ್ನು ರಚಿಸುವುದು ಸುಲಭ. ಆದರೆ ಅವುಗಳನ್ನು ಮುನ್ನಡೆಸಿಕೊಂಡು ಹೋಗುವುದು ತುಂಬಾ ಕಷ್ಟ. ಹೀಗಿರುವಾಗ, ಹಾಲಕೆರೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘವು ಶತಮಾನ ಪೂರೈಸಿ 112ನೇ ವರ್ಷದತ್ತ ದಾಪುಗಾಲನ್ನಿಟ್ಟಿರುವುದು ಹೆಮ್ಮೆ ಮತ್ತು ಸಂತಸದ ಸಂಗತಿ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಸಮೀಪದ ಹಾಲಕೆರೆ ಗ್ರಾಮದಲ್ಲಿ ಜರುಗಿದ ಸಂಘದ ಶತಮಾನೋತ್ಸವ ಹಾಗೂ ನೂತನ ಕಟ್ಟಡದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಇಂದಿನ ಸಮಾರಂಭ ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಹುದು. ಇಂತಹ ಆಚರಣೆಗಳು ಹಿಂದಿನ ನ್ಯೂನತೆಗಳನ್ನು ಸರಿಪಡಿಸಿಕೊಂಡು ಮುನ್ನಡೆಯಲು ಪ್ರೇರಕವಾಗುತ್ತವೆ. ಸಂಘದ ಸದಸ್ಯರು ಮತ್ತು ಸಾರ್ವಜನಿಕರು ಇದೇ ರೀತಿಯ ಹೊಂದಾಣಿಕೆಯಿಂದ ನಡೆದು ಈ ಸಂಘವನ್ನು ಇನ್ನಷ್ಟು ಅಭಿವೃದ್ಧಿ ಪಥದತ್ತ ಕೊಂಡೊಯ್ಯಬೇಕೆಂದು ಪಾಟೀಲ ತಿಳಿಸಿದರು.



ಸಂಘಗಳು ಬಲಗೊಳ್ಳಬೇಕಾದರೆ ಇವುಗಳಿಗೆ ಮಾತೃ ಸ್ವರೂಪಿಯಾಗಿರುವ ಕೆಸಿಸಿ ಬ್ಯಾಂಕ್ ಬಲಿಷ್ಠವಾಗಿರಬೇಕು. ಈಗ ಅದು ಉತ್ತಮ ಸ್ಥಿತಿಯಲ್ಲಿದ್ದು, ರೈತರು ಆತಂಕಪಡುವ ಸ್ಥಿತಿ ಈಗಿಲ್ಲ. ತಾಲೂಕಿನಲ್ಲಿನ ಎಲ್ಲ ಕೆರೆಗಳಿಗೆ ನೀರು ತುಂಬಿಸುವ ಕಾರ್ಯದ ಕ್ರಿಯಾ ಯೋಜನೆಯನ್ನು ತಯಾರಿಸಿ ಸರಕಾರಕ್ಕೆ ಸಲ್ಲಿಸಲಾಗಿದೆ. ಇದಕ್ಕೆ ಶೀಘ್ರದಲ್ಲಿ ಅನುಮೋದನೆ ದೊರಕಲಿದೆ. ಇದರಿಂದ ರೈತರ ಮತ್ತು ಸಾರ್ವಜನಿಕರ ಬಾಳು ಬಂಗಾರವಾಗುತ್ತದೆ. ರೈತರು ತಮ್ಮ ಹಕ್ಕುಗಳಿಗೆ ದನಿಯೆತ್ತಿದಾಗ ಮಾತ್ರ ಅವರ ಆಸೆಗಳು ಈಡೇರುತ್ತವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಅಂದಾನಗೌಡ ಪಾಟೀಲ ಮಾತನಾಡಿ, ಬೆತ್ತದ ಅಜ್ಜನವರಿಂದ ಪ್ರಾರಂಭಗೊಂಡ ಈ ಸಂಘಕ್ಕೆ ಅವರ ಸಂಪೂರ್ಣ ಆಶೀರ್ವಾದವಿದೆ. ಆದ್ದರಿಂದ ಸಂಘವು ನೂರು ವರ್ಷಗಳನ್ನು ಪೂರೈಸಿ ಮುನ್ನಡೆದಿದೆ. ಇದಕ್ಕೆ ಗ್ರಾಮಸ್ಥರೆಲ್ಲರೂ ನೀಡುತ್ತಿರುವ ಸಹಕಾರವನ್ನು ಎಂದಿಗೂ ಮರೆಯಲಾರೆ ಎಂದರು.

ರೋಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೀರಣ್ಣ ಶೆಟ್ಟರ, ಮುಖಂಡ ಐ.ಎಸ್. ಪಾಟೀಲ, ಎಚ್.ಎಸ್. ಸೋಂಪುರ, ಬಸವರಾಜ ಕಡೆಮನಿ ಮಾತನಾಡಿ, ಸಂಘದ ಶತಮಾನೋತ್ಸವಕ್ಕೆ ಶುಭ ಹಾರೈಸಿದರು. ಧುರೀಣ ಮಿಥುನ್ ಪಾಟೀಲ ರೈತ ಫಲಾನುಭವಿಗಳಿಗೆ ಟ್ರಾಕ್ಟರ್ ಸಾಲವನ್ನು ವಿತರಿಸಿದರು.

ನಿಡಗುಂದಿಕೊಪ್ಪದ ಅಭಿನವ ಚನ್ನಬಸವ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ವೇದಿಕೆಯ ಮೇಲೆ ಹಾಲಕೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಗಿರೀಶಗೌಡ ಮುಲ್ಕಿಪಾಟೀಲ, ಫಕೀರಪ್ಪ ಕುಕನೂರ, ಸಿದ್ದನಗೌಡ ಪಾಟೀಲ, ಸೊಪ್ಪಯ್ಯಸ್ವಾಮಿ ಸೊಪ್ಪಿಮಠ, ಎ.ಆರ್. ಮಲ್ಲನಗೌಡ್ರ, ಕೃಷ್ಣಗೌಡ ಪಾಟೀಲ, ಹನುಮಂತಪ್ಪ ದ್ವಾಸಲ, ವಿ.ಆರ್. ಗುಡಿಸಾಗರ, ಗುರಣ್ಣ ಅವರೆಡ್ಡಿ ಮುಂತಾದವರಿದ್ದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ಶರಣರ ಕಾಯಕ ತತ್ವದ ಅಡಿಯಲ್ಲಿ ಈ ಸಂಘಗಳು ರಚನೆಯಾಗಿವೆ. ಪರಸ್ಪರ ಸಹಕಾರದಿಂದ ಸಾಗಿ ಎಲ್ಲರೂ ಅಭಿವೃದ್ಧಿ ಹೊಂದಲಿ ಎಂಬ ಸದಾಶಯದಿಂದ ಇವುಗಳಿಗೆ ಸಹಕಾರಿ ಸಂಘಗಳೆಂದು ಹೆಸರಿಸಲಾಗಿದೆ. ಎಲ್ಲರೂ ಸಹಕಾರದಿಂದ ನಡೆದು ಹಾಲಕೆರೆಯನ್ನು ಮಾದರಿ ಗ್ರಾಮ ಮಾಡಬೇಕೆಂದರು.

ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೇರವೇರಿಸಿದ ಶಾಸಕ ಡಾ. ಚಂದ್ರು ಲಮಾಣಿ

# ಅಲ್ಪಸಂಖ್ಯಾತರ ಕಾಲೋನಿಗಳು ಅಭಿವೃದ್ಧಿಯಾಗಬೇಕು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಪಟ್ಟಣ ತೀವ್ರಗತಿಯಲ್ಲಿ ಅಭಿವೃದ್ಧಿ ಹೊಂದುತ್ತಿದ್ದು, ಅದಕ್ಕೆ ತಕ್ಕಂತೆ ಅಭಿವೃದ್ಧಿ ಕಾರ್ಯಗಳು, ಜನತೆಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರದಿಂದ ಹೆಚ್ಚಿನ ಅನುದಾನದ ಅವಶ್ಯಕತೆಯಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಬುಧವಾರ ಪಟ್ಟಣದ 7ನೇ ವಾರ್ಡಿನ ಜನ್ನತ್ ನಗರದಲ್ಲಿ ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿ ಯೋಜನೆಯಡಿಯಲ್ಲಿ ಅಂದಾಜು 1 ಕೋಟಿ ರೂ ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೇರವೇರಿಸಿ ಮಾತನಾಡಿದರು.




ಪಟ್ಟಣದಲ್ಲಿ ಹಲವು ವರ್ಷಗಳಿಂದ ಅಲ್ಪಸಂಖ್ಯಾತರ ಕಾಲೋನಿಗಳು ಅಭಿವೃದ್ಧಿಗಾಗಿ ಕಾದಿವೆ. ಅಲ್ಪಸಂಖ್ಯಾತರ ಕಾಲೋನಿಗಳು ಅಭಿವೃದ್ಧಿಯಾಗಬೇಕು. ಇಲ್ಲಿನ ಜನರಿಗೂ ರಸ್ತೆ, ಚರಂಡಿ, ಕುಡಿಯುವ ನೀರು, ಬೀದಿದೀಪ ಹೀಗೆ ಮೂಲಭೂತ ಸೌಲಭ್ಯಗಳು ಸಿಗಬೇಕು. ಈ ನಿಟ್ಟಿನಲ್ಲಿ ಜನ್ನತ್ ನಗರದಲ್ಲಿ ಸಿಸಿ ರಸ್ತೆ ಕಾಮಗಾರಿ ಕೈಗೊಳ್ಳಲಾಗಿದೆ. ಮುಖ್ಯವಾಗಿ ಪಟ್ಟಣದ ದೂದಪೀರಾಂ ದರ್ಗಾ ರಸ್ತೆ ಅಭಿವೃದ್ಧಿಯಾಗಬೇಕು. ಅಲ್ಲದೇ ಬೆಳೆಯುತ್ತಿರುವ ಪಟ್ಟಣದ ಸಮಗ್ರ ಅಭಿವೃದ್ಧಿಗೆ ಸರ್ಕಾರದಿಂದ ಹೆಚ್ಚಿನ ಅನುದಾನ ತರುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ನಿವಾಸಿಗರ ಸಹಕಾರದೊಂದಿಗೆ ಗುತ್ತಿಗೆದಾರರು ಆದಷ್ಟು ಬೇಗ ಗುಣಮಟ್ಟದ ಕಾಮಗಾರಿ ಮಾಡಬೇಕು ಎಂದರು.

ಈ ವೇಳೆ ಬಿಜೆಪಿ ಮಂಡಲ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ವಿಜಯ ಮೆಕ್ಕಿ, ಅಲ್ಪಸಂಖ್ಯಾತರ ಇಲಾಖೆಯ ಅಧಿಕಾರಿ ಅಮಿತ್ ಬಿದರಿ, ಎಂ.ಆರ್. ಪಾಟೀಲ, ಬಿಜೆಪಿ ನಗರ ಘಟಕದ ಅಧ್ಯಕ್ಷ ನವೀನ ಬೆಳ್ಳಟ್ಟಿ, ಜಾಕೀರಹುಸೇನ್ ಹವಾಲ್ದಾರ, ಗಿರೀಶ ಚೌರಡ್ಡಿ, ಗಂಗಾಧರ ಮೆಣಸಿನಕಾಯಿ, ಸಂತೋಷ ಜಾವೂರ, ಸಿದ್ದು ದುರಗಣ್ಣವರ, ಬಸವರಾಜ ಚಕ್ರಸಾಲಿ, ಜಾಂಗೀರಸಾಬ್ ಬಳಿಗಾರ, ಮೈನುದ್ದಿನ್ ಮೊಮೀನ್, ಮಹ್ಮದಗೌಸ ಹೂಲಗೂರ, ಮುನ್ನಾ ಹವಾಲ್ದಾರ, ಮಹಮ್ಮದಲಿ ಸಿದ್ದಿ ಸೇರಿ ಹಲವರಿದ್ದರು.

ಈ ವೇಳೆ ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಉಪಾಧ್ಯಕ್ಷ ಫಿರ್ದೋಸ್ ಆಡೂರ, ವಾರ್ಡಿನ ಸದಸ್ಯ ಬಸವರಾಜ ಓದುನವರ ಮಾತನಾಡಿ, ಪಟ್ಟಣದಲ್ಲಿನ ಅಲ್ಪಸಂಖ್ಯಾತರು ಹೆಚ್ಚಿನ ಸಂಖ್ಯೆಯಲ್ಲಿರುವ ಪ್ರದೇಶಗಳ ಅಭಿವೃದ್ಧಿಗೆ ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿ ಯೋಜನೆಯಡಿ 3 ಕೋಟಿ ರೂ ಅನುದಾನ ಲಭಿಸಿದೆ. ಇನ್ನಷ್ಟು ಅನುದಾನ ತರುವ ಮೂಲಕ ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗೆ ಪಕ್ಷಾತೀತವಾಗಿ ಶ್ರಮಿಸಲಾಗುವುದು ಎಂದರು.

# ಎಲ್ ಇಡಿ ಪ್ರಚಾರ ವಾಹನಕ್ಕೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಮಿಕ ಇಲಾಖೆ ಹಾಗೂ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಮಾಹಿತಿ ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳಡಿಯಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯ ಸೌಲಭ್ಯಗಳು ಹಾಗೂ ಸಂಸ್ಥೆಯ ನೋಂದಣಿ ಹಾಗೂ ಸುಂಕ ಪಾವತಿ ವಿಧಾನ, ಕರ್ನಾಟಕ ರಾಜ್ಯ ಅಸಂಘಟಿತ ಸಮಾಜಿಕ ಭದ್ರತಾ ಮಂಡಳಿಯ ಯೋಜನೆಗಳು, ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿಷೇಧ ಬಗ್ಗೆ ಹಾಗೂ ಕಾರ್ಮಿಕ ಇಲಾಖೆಯಿಂದ ಅನುಷ್ಠಾನವಾಗುತ್ತಿರುವ ಯೋಜನೆಗಳ ಬಗ್ಗೆ 6 ದಿನಳವರೆಗೆ ಗದಗ ಜಿಲ್ಲೆಯಾದ್ಯಂತ ಎಲ್ ಇ ಡಿ ಪ್ರಚಾರ ವಾಹನಕ್ಕೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ ಎಸ್ ಶಿವನಗೌಡ್ರ ಹಾಗೂ ಕಾರ್ಮಿಕ ಅಧಿಕಾರಿಗಳಾದ ಶ್ರೀಶೈಲ ಸೋಮನಕಟ್ಟಿ ಅವರು ಜಿಲ್ಲಾಡಳಿತ ಭವನದಲ್ಲಿ ಬುಧವಾರ ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಕಾರ್ಮಿಕ ನಿರೀಕ್ಷಕರಾದ ಉಮೇಶ ಹುಲ್ಲಣ್ಣವರ, ಕುಮಾರಿ ಸುಷ್ಮಾ, ಎಕ್ಸಿಕ್ಯೂಟಿವ್ ಫಕ್ಕೀರಪ್ಪ ಹಡಗಲಿ, ಸಂದೇಶ ಪಾಟೀಲ, ಯೋಜನ ನಿರ್ದೇಶಕರು, ಬಾಲ ಕಾರ್ಮಿಕ ಯೋಜನೆ ಹಾಗೂ ಕಾರ್ಮಿಕ ಇಲಾಖೆಯ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಬರವಿಲ್ಲ

■ವಿಜಯಸಾಕ್ಷಿ ಸುದ್ದಿ, ರೋಣ

ಮತಕ್ಷೇತ್ರದ ಜನರ ಇಚ್ಛೆಯಂತೆ ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿದ್ದು, ಕ್ಷೇತ್ರದ ಸಮಗ್ರ ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ರೀತಿಯ ಬರವಿಲ್ಲ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಇಟಗಿ, ನೆಲ್ಲೂರ, ಪ್ಯಾಟಿ ಗ್ರಾಮಗಳಲ್ಲಿ ವಿವಿದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದರು.



ನೆಲ್ಲೂರ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕೆ 46 ಲಕ್ಷ ರೂ ಹಾಗೂ ಪ್ಯಾಟಿ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣಕ್ಕೆ 46 ಲಕ್ಷ ರೂ ಅನುದಾನವನ್ನು ಈಗಾಗಲೇ ಬಿಡುಗಡೆಗೊಳಿಸಿದ್ದು, ಕಾಮಗಾರಿಗೆ ಚಾಲನೆ ನೀಡಲಾಗಿದೆ. ಮುಖ್ಯವಾಗಿ ಶಾಸಕರ ಅನುದಾನದಲ್ಲಿ ಇಟಗಿ ಆದರ್ಶ ಶಾಲೆಯಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಶುದ್ಧ ಕುಡಿಯುವ ನೀರಿನ ಘಟಕವನ್ನು ನಿರ್ಮಿಸಿ ಉದ್ಘಾಟಿಸಲಾಗಿದೆ. ಮತಕ್ಷೇತ್ರದ ಸಮಗ್ರ ಅಭಿವೃದ್ಧಿ ಬಯಸಿ ಸರಕಾರದಿಂದ ಅನುದಾನವನ್ನು ತರಲಾಗಿದ್ದು, ಕ್ಷೇತ್ರದ ಜನರ ಇಚ್ಛೆಯಂತೆ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. ಗ್ಯಾರಂಟಿ ಯೋಜನೆಗಳಿಗೂ ತೊಂದರೆಯಿಲ್ಲ ಮತ್ತು ಅಭಿವೃದ್ಧಿ ಕಾರ್ಯಗಳಲ್ಲಿಯೂ ಹಿನ್ನಡೆಯಿಲ್ಲ ಎನ್ನುವುದನ್ನು ಕ್ಷೇತ್ರದ ಜನರು ಅರಿಯಬೇಕು ಎಂದರು.

ಗ್ರಾಮೀಣ ಭಾಗಗಳಲ್ಲಿ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಗುಣಮಟ್ಟದ ಕಟ್ಟಡಗಳನ್ನು ನಿರ್ಮಿಸಲು ಮುಂದಾಗಿದ್ದು, ಅಂಗನವಾಡಿ ಕೇಂದ್ರಗಳನ್ನು ಸಹ ನಿರ್ಮಿಸಲಾಗುತ್ತಿದೆ. ಗ್ರಾಮೀಣ ಭಾಗದ ಜನರು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಜೊತೆಗೆ ಗ್ರಾಮಸ್ಥರ ಇಚ್ಛೆಯಂತೆ ದೇವಸ್ಥಾನದ ಸಭಾಭವನಗಳ ನಿರ್ಮಾಣಕ್ಕೆ ಅಗತ್ಯ ಅನುದಾನವನ್ನು ಒದಗಿಸಲಾಗುವುದು ಎಂದರು.

ಸಂಗನಗೌಡ ಪಾಟೀಲ, ವಿ.ಆರ್. ಗುಡಿಸಾಗರ, ಶರಣಗೌಡ ಪಾಟೀಲ, ಪ್ರಭು ಮೇಟಿ, ಮಂಜುಳಾ ಹುಲ್ಲಣ್ಣವರ, ಮೋಹನ್ ಹುಲ್ಲಣ್ಣವರ, ಇಸ್ಮಾಯಿಲ್ ಹೊರಪೇಟಿ ಸೇರಿದಂತೆ ಗ್ರಾ.ಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು.

ಬಿ.ಜಿ. ಅಣ್ಣಿಗೇರಿ ಗುರುಕುಲ ಆಶ್ರಮದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ

# ವಿದ್ಯಾರ್ಥಿಗಳು ಕಷ್ಟಪಟ್ಟು, ಇಷ್ಟದಿಂದ ಓದಲಿ

■ವಿಜಯಸಾಕ್ಷಿ ಸುದ್ದಿ, ಗದಗ

ವ್ಯಾಸಂಗದಲ್ಲಿ ವಿದ್ಯಾರ್ಥಿಗಳು ಕಷ್ಟಪಟ್ಟು, ಇಷ್ಟದೊಂದಿಗೆ ಅಧ್ಯಯನ ಮಾಡಿ ಉತ್ತಮ ಫಲಿತಾಂಶವನ್ನು ಕಂಡುಕೊಳ್ಳಬೇಕೆಂದು ಫ್ರಾನ್ಸ್‌ನ ಆರೋಗ್ಯ ಕಾರ್ಯಕರ್ತೆ ಪ್ರಸಿಲ್ಲಾ ಚರ್ರಿ ಹೇಳಿದರು.

ಅವರು ಗದುಗಿನ ಬಿ.ಜಿ. ಅಣ್ಣಿಗೇರಿ ಗುರುಕುಲ ಆಶ್ರಮದಲ್ಲಿ ಶಿಕ್ಷಣ ಪಡೆದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಹಾಗೂ ಸರಸ್ವತಿ ಪೂಜಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡಿದರು.




ಕಲಿಯಬೇಕು, ಜೀವನದಲ್ಲಿ ಉನ್ನತ ಹುದ್ದೆಯನ್ನು ಪಡೆಯಬೇಕೆಂಬ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ಶಿಕ್ಷಣವು ಮೆಟ್ಟಿಲಾಗಬಲ್ಲದು. ಆದ್ದರಿಂದ ವಿದ್ಯಾರ್ಥಿಗಳು ಕಲಿಯುವ ವಯಸ್ಸಿನಲ್ಲಿ ಕಲಿಯುವದನ್ನಷ್ಟೇ ಮಾಡಬೇಕು ಎಂದರು.

ಬಿ.ಜಿ. ಅಣ್ಣಿಗೇರಿ ಅವರು ಒಬ್ಬ ಶಿಕ್ಷಕರಾಗಿ, ಮುಖ್ಯೋಪಾಧ್ಯಾಯರಾಗಿ ತಮ್ಮ ನಿವೃತ್ತಿಯ ಬಳಿಕ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುವುದರೊಂದಿಗೆ ಮಾರ್ಗದರ್ಶನ, ಸಂಸ್ಕೃತಿ, ಸಂಸ್ಕಾರ, ಧರ್ಮ ಮಾರ್ಗದಲ್ಲಿ ಮುನ್ನಡೆಯುವದನ್ನು ರೂಢಿಸಿ ಆದರ್ಶ ವ್ಯಕ್ತಿಗಳಾಗಿರುದನ್ನು ತಿಳಿದು ಬಹಳ ಸಂತೋಷವಾಯಿತು. ಅಂತಹ ಗುರುವಿಗೆ ಗೌರವ ಸಲ್ಲಿಸಬೇಕೆಂದರೆ ಉತ್ತಮ ಫಲಿತಾಂಶವನ್ನು ಕಂಡುಕೊಳ್ಳುವುದೇ ಮಾರ್ಗ ಎಂದರು.

ಲಕ್ಷ್ಮೇಶ್ವರದ ಅಂಚೆ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮೇಘಾ ಬೆಲ್ಲದ ಅವರು ಮಾತನಾಡಿ, ನಾನು ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಪಾಠ ಹೇಳಿಸಿಕೊಂಡಿದ್ದೆ. ಅಲ್ಲದೆ ಪ್ರತಿಷ್ಠಾನದಿಂದ ಪ್ರತಿಭಾ ಪುರಸ್ಕಾರ ಪಡೆದು ಇಂದು ಒಂದು ಹುದ್ದೆಯಲ್ಲಿರುವುದು ನನಗೆ ಖುಷಿ ತಂದಿದೆ. ಅಂದು ಪ್ರತಿಭಾ ಪುರಸ್ಕಾರ ಪಡೆದುಕೊಂಡಿದ್ದ ನನಗೆ ಗುರು ಋಣ ತಿರಿಸಬೇಕೆಂಬ ಬಯಕೆ ಇತ್ತು. ಆದ್ದರಿಂದ 10 ಸಾವಿರ ರೂ.ಗಳನ್ನು ಪ್ರತಿಷ್ಠಾನಕ್ಕೆ ದೇಣಿಗೆ ನೀಡಿ ಎಲ್ಲ ವಿದ್ಯಾರ್ಥಿಗಳಿಗೆ ಉಪಹಾರದ ಸೇವೆಗೆ ಅವಕಾಶ ದೊರೆತಿರುವದು ನನ್ನ ಭಾಗ್ಯ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷರಾದ ಶಿವಕುಮಾರ ಪಾಟೀಲ ಮಾತನಾಡಿ, ಬಿ.ಜಿ. ಅಣ್ಣಿಗೇರಿ ಗುರುಗಳ ತರುವಾಯ ಆಶ್ರಮವನ್ನು ಪ್ರತಿಷ್ಠಾನವು ಶೈಕ್ಷಣಿಕ ಹಿತದೃಷ್ಟಿಯಿಂದ ಮುನ್ನಡೆಸಿಕೊಂಡು ಬಂದಿದ್ದು, ಪ್ರತಿಷ್ಠಾನದ ಪದಾಧಿಕಾರಿಗಳ, ಶಿಷ್ಯ ಬಳಗದ ಸಹಕಾರದೊಂದಿಗೆ ಮುನ್ನಡೆದಿದೆ. ಇಲ್ಲಿ ಶಿಕ್ಷಕ-ಶಿಕ್ಷಕಿಯರು ಬಂದು ನಿಸ್ವಾರ್ಥ ಮನೋಭಾವದಿಂದ ಸೇವೆ ಸಲ್ಲಿಸುತ್ತಿದ್ದಾರೆ ಎಂದರು.

ಟ್ರಸ್ಟ್ ನಿರ್ದೇಶಕ ಡಾ. ಬಸವರಾಜ ಚೆನ್ನಪ್ಪಗೌಡ್ರು ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಪಾವನಿ ಪ್ರಾರ್ಥಿಸಿದಳು, ಶಿಕ್ಷಕಿ ಜ್ಯೋತಿ ವಡಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕ ಪ್ರಸನ್ನಕುಮಾರ ಗುತ್ತಿ ನಿರೂಪಿಸಿದರು. ಶಿಕ್ಷಕಿ ಮಂಜುಳಾ ತುಮ್ಮರಮಟ್ಟಿ ವಂದಿಸಿದರು.

## ಸ್ವಾಮಿ ನಿಷ್ಠೆಯ ಶ್ವಾನ

ಬಿ.ಜಿ. ಅಣ್ಣಿಗೇರಿ ಗುರುಗಳು ಸಾಕಿದ್ದ ಶ್ವಾನ ಗುರುಗಳು ಲಿಂಗೈಕ್ಯರಾದ ದಿನ ಕಣ್ಣೀರಿಟ್ಟು ಉಪವಾಸವಿತ್ತು. ಅಂದಿನಿಂದ ಆಶ್ರಮದಲ್ಲಿ ಸ್ವಾಮಿ ನಿಷ್ಠೆಯ ಪ್ರತೀಕವಾಗಿದೆ. ಸಭೆ-ಸಮಾರಂಭವಿದ್ದಾಗ ವೇದಿಕೆಯ ಮುಂಚೂಣಿಯಲ್ಲಿರುವದು ಆಶ್ರಮದ ಗುರುಗಳ, ವಿದ್ಯಾರ್ಥಿಗಳ ಮೆಚ್ಚುಗೆಯೊಂದಿಗೆ ನಂಬಿಗಸ್ತ ಪ್ರಾಣಿ ಎಂಬುದನ್ನು ಸಾಬೀತುಗೊಳಿಸಿದೆ. ಅತಿಥಿಗಳೊಂದಿಗೆ ತಾನೂ ಫೋಟೋ ಕ್ಲಿಕ್ಕಿಸಿಕೊಂಡಿದ್ದನ್ನು ಕಾಣಬಹುದು ಎಂದೆನ್ನುತ್ತಾರೆ ಶಿವಕುಮಾರ ಪಾಟೀಲ.


**ಜಿಲ್ಲಾ ಪಂಚಾಯತ ಗದಗ**
**ತಾಲೂಕ ಪಂಚಾಯತ ನರಗುಂದ**
**ಗ್ರಾಮ ಪಂಚಾಯತ ಕಾರ್ಯಾಲಯ ಚಿಕ್ಕನರಗುಂದ**

ಕ್ರ.ಸಂ.ಗ್ರಾ.ಪಂ.ಚಿ/ಮ.ಗಾ.ರಾ.ಗ್ರಾ.ಉ.ಖಾ.ಯೋ/24-25/1 ದಿನಾಂಕ : 06/02/2025

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಚಿಕ್ಕನರಗುಂದ ಇವರು 2024-25 ನೇ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೊಂದಾಯಿತ ಅರ್ಹ ಸಾಮಗ್ರಿ ಪೂರೈಕೆದಾರರಿಂದ ಕಾಮಗಾರಿವಾರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯಿತಿಂದ ಕಛೇರಿ ಅವಧಿಯಲ್ಲಿ ಖುದ್ದಾಗಿ ಖಾಲಿ ಟೆಂಡರ ಪಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ | ಕಾಮಗಾರಿಗಳ ಹೆಸರು | ಅಂದಾಜು ಮೊತ್ತ ರೂ | ಸಾಮಗ್ರಿ ಮೊತ್ತ ರೂ | ಖಾಲಿ ಟೆಂಡರ್ ಫಾರಂ ಬೆಲೆ ರೂ | ಷರಾ |
|---|---|---|---|---|---|
| 1 | ಚಿಕ್ಕನರಗುಂದ ಗ್ರಾಮದ ಅಮರಗೋಳ ಹೊಲದಿಂದ ಬಾಚಿಯವರ ಹೊಲದವರೆಗೆ ರಸ್ತೆ ನಿರ್ಮಾಣ. | 275000 | 207034 | 1000 | ಖಾಲಿ ಟೆಂಡರ್ ಫಾರಂ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 2 | ಚಿಕ್ಕನರಗುಂದ ಗ್ರಾಮದ ರವಿ ಕರಿ ಹೊಲದಿಂದ ಯಲ್ಲಪ್ಪ ತಳವಾರ ಹೊಲದವರೆಗೆ ರಸ್ತೆ ನಿರ್ಮಾಣ. | 250000 | 164143 | 1000 | |
| 3 | ಚಿಕ್ಕನರಗುಂದ ಗ್ರಾಮದ ವಿಠ್ಠಲರಡ್ಡಿಯವರ ಪ್ಲಾಟಿನಲ್ಲಿ ರಸ್ತೆ ನಿರ್ಮಾಣ. | 250000 | 187153 | 1000 | |
| 4 | ಚಿಕ್ಕನರಗುಂದ ಗ್ರಾಮದ ಯಲ್ಲಪ್ಪ ಕಲಹಾಳ ಹೊಲದಿಂದ ಬ್ಯಾಳಿಯವರ ಹೊಲದವರೆಗೆ ರಸ್ತೆ ನಿರ್ಮಾಣ. | 200000 | 149782 | 1000 | |
| 5 | ಚಿಕ್ಕನರಗುಂದ ಗ್ರಾಮದ ನರಗುಂದ ಒಳ ರಸ್ತೆಯಿಂದ ಕುಂಭಾರ ಹೊಲದವರೆಗೆ ರಸ್ತೆ ನಿರ್ಮಾಣ. | 124000 | 80587 | 1000 | |
| 6 | ಚಿಕ್ಕನರಗುಂದ ಗ್ರಾಮದಿಂದ ಯಲ್ಲಮ್ಮ ಗುಡ್ಡಕ್ಕೆ ಹೋಗುವ ರಸ್ತೆ ನಿರ್ಮಾಣ. | 300000 | 165000 | 1000 | |

ಅರ್ಹ ವೆಂಡರ/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ವಿತರಿಸುವ ದಿನಾಂಕ : **15-02-2025** ರಿಂದ **25-02-2025**ರ ಒಳಗಾಗಿ ಗ್ರಾಮ ಪಂಚಾಯತ ಕಾರ್ಯಾಲಯದ ಕಛೇರಿ ಸಮಯದಲ್ಲಿ ಪಡೆದು ದಿನಾಂಕ: **15-02-2025** ರಿಂದ **25-02-2025** ರೊಳಗೆ ಭರ್ತಿ ಮಾಡಿ ದರಪಟ್ಟಿಗಳನ್ನು ಪ್ರತ್ಯೇಕವಾಗಿ ಕಾಮಗಾರಿ ವಾರು ಗ್ರಾಮ ಪಂಚಾಯತಿ ಕಚೇರಿಗೆ ಸಲ್ಲಿಸುವುದು ದಿನಾಂಕ : 26-02-2025 ರಂದು ದರಪಟ್ಟಿಗಳನ್ನು ತೆರೆಯಲಾಗುತ್ತದೆ. ಷರತ್ತು/ನಿಬಂದನೆಗಳಿಗೆ ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಮೇಲ್ಕಂಡ ದಿನಾಂಕದೊಳಗೆ ಗ್ರಾಮ ಪಂಚಾಯತ ಕಾರ್ಯಾಲಯ ಚಿಕ್ಕನರಗುಂದದಲ್ಲಿ ಪಡೆಯಬಹುದಾಗಿದೆ.

ಸಹಿ/-ಪಂಚಾಯತ ಅಭಿವೃದ್ಧಿ ಅಧಿಕಾರಿಗಳು
ಗ್ರಾಮ ಪಂಚಾಯತ ಚಿಕ್ಕನರಗುಂದ

ವಾ.ಸಾ.ಇ/ಗದಗ/604/ದೇಶಪಾಂಡೆಪಬ್ಲಿಸಿಟಿ/2024-25

ಸಹಿ/-ಅಧ್ಯಕ್ಷರು
ಗ್ರಾಮ ಪಂಚಾಯತ ಚಿಕ್ಕನರಗುಂದ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka